Volume : 9 | Issue : 213 | November : 14, 2026 : Saturday
ಸಂಪುಟ : 9 | ಸಂಚಿಕೆ : 213 | ನವಂಬರ್ : 14, 2026 : ಶನಿವಾರ

www.VIKRAMAVAHINI.com

—— ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ ——

ವಿಕ್ರಮ ವಾಹಿನಿ

ಪುಟ 4 | ₹2 | ಕನ್ನಡ ದಿನಪತ್ರಿಕೆ

VIKRAMA VAHINI
PRGI NO: KARKAN/2018/78481



'ಅಮೃತವರ್ಷಿಣಿ' ಕನ್ನಡ ಚಿತ್ರರಂಗದ ೧೦ರ ಯಶಸ್ವಿ ಸಿನಿಮಾಗಳಲ್ಲೊಂದು. ಚಂದನವನದ ಬಹುಬೇಡಿಕೆ ಕಲಾವಿದರಾದ ರಮೇಶ್ ಅರವಿಂದ್, ಸುಹಾಸಿನಿ ಹಾಗೂ ಶರತ್ ಬಾಬು ಅಭಿನಯದ ಈ ಸಿನಿಮಾ 1997ರಲ್ಲಿ ತೆರೆಕಂಡು ಅಪಾರ ಜನಮನ್ನಣೆ ಗಳಿಸಿತ್ತು. ಇದೀಗ ಬರೋಬ್ಬರಿ ೩ ದಶಕಗಳ ಬಳಿಕ ಚಿತ್ರದ ಮತ್ತೊಂದು ಭಾಗ ನಿರ್ಮಾಣಗೊಳ್ಳಲು ಸಜ್ಜಾಗಿದೆ.


ನಡುರಸ್ತೆಯಲ್ಲೇ ಪತ್ನಿ ಎದುರೇ ರಿಯಲ್ ಎಸ್ಟೇಟ್ ಉದ್ಯಮಿ ಹತ್ಯೆ | ಪುಟ 2

ಪಟಾಕಿ ಸಿಡಿಸುವ ಸಮಯದ ನಿಯಮ ಉಲ್ಲಂಘನೆಗೆ ಹೈ ಕಳವಳ | ಪುಟ 4

'ಸಮಾನ ಆರ್ಥಿಕ ಹೊಣೆಗಾರಿಕೆ ಇರಲಿ'

ಮೋದಿ ಎದುರು ರಾಜ್ಯದ ಬೇಡಿಕೆಗಳ ಪಟ್ಟಿ ಇರಿಸಿದ ಸಿಎಂ ಡಿಕೆಶಿ

ಮೆಟ್ರೋ 500 ಕಿ.ಮಿ. ವಿಸ್ತರಣೆ; ತ್ವರಿತ ಅನುಮೋದನೆಗೆ ಆಗ್ರಹ



● ವಿಕ್ರಮ ವಾಹಿನಿ । ಬೆಂಗಳೂರು

ಮೆಟ್ರೋ ರೈಲು ಯೋಜನೆಗಳ ಅನುಷ್ಠಾನದಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ನಡುವೆ ಹೆಚ್ಚು ಸಮಾನವಾದ ಆರ್ಥಿಕ ಹೊಣೆಗಾರಿಕೆ ಇರಬೇಕು. ಯೋಜನೆಗಳಿಗೆ ತ್ವರಿತ ಅನುಮೋದನೆ ನೀಡುವ ಜೊತೆಗೆ ಮೂಲಸೌಕರ್ಯ ಅಭಿವೃದ್ಧಿಯ ಆರ್ಥಿಕ ಹೊರೆಯನ್ನು ಸಮಾನವಾಗಿ ಹಂಚಿಕೊಳ್ಳುವ ವ್ಯವಸ್ಥೆ ರೂಪಿಸಬೇಕು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಶುಕ್ರವಾರ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರಿಗೆ ಮನವಿ ಮಾಡಿದರು. ಮುಂಬರುವ ವರ್ಷಗಳಲ್ಲಿ ಬೆಂಗಳೂರಿನ ಮೆಟ್ರೋ ಜಾಲವನ್ನು 500 ಕಿ.ಮೀ.ಗೆ ವಿಸ್ತರಿಸುವ ಮಹತ್ವಾಕಾಂಕ್ಷಿ ಗುರಿಯನ್ನು ಅವರು ಪ್ರಕಟಿಸಿದರು.

ಬೆಂಗಳೂರಿನ ಪಿಂಕ್ ಲೈನ್ ಮೆಟ್ರೋ ಉದ್ಘಾಟನೆ ಅಂಗವಾಗಿ ಭಾರತೀಯ ನಿರ್ವಹಣಾ ಸಂಸ್ಥೆಯಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ, ರಾಜ್ಯಪಾಲರಾದ ಸುಧಾ ಯಾದವ್, ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಹಾಗೂ ಬೆಂಗಳೂರು ದಕ್ಷಿಣ ಕ್ಷೇತ್ರದ ಸಂಸದ ತೇಜಸ್ವಿ ಸೂರ್ಯ ಅವರ ಉಪಸ್ಥಿತಿಯಲ್ಲಿ ಮಾತನಾಡಿದ ಮುಖ್ಯಮಂತ್ರಿ, ಪಿಂಕ್ ಲೈನ್ ಉದ್ಘಾಟನೆಯೊಂದಿಗೆ ನಮ್ಮ ಮೆಟ್ರೋ ಜಾಲ 100 ಕಿ.ಮೀ. ಗಡಿ ದಾಟುತ್ತಿರುವುದು ಬೆಂಗಳೂರಿನ ಸಾರ್ವಜನಿಕ ಸಾರಿಗೆ ವ್ಯವಸ್ಥೆಯ ಅಭಿವೃದ್ಧಿಯಲ್ಲಿ ಮಹತ್ವದ ಮೈಲಿಗಲ್ಲಾಗಿದೆ ಎಂದರು.

ಕರ್ನಾಟಕವು ಹಲವು ಕ್ಷೇತ್ರಗಳಲ್ಲಿ ದೇಶಕ್ಕೆ ಮೊದಲ ಕೊಡುಗೆಗಳನ್ನು ನೀಡಿರುವ ಹೆಮ್ಮೆಯ ಪರಂಪರೆ ಹೊಂದಿದೆ ಎಂದು ಹೇಳಿದ ಶಿವಕುಮಾರ್, ಕೈಗಾರಿಕೆ, ತಂತ್ರಜ್ಞಾನ ಮತ್ತು ವಿಜ್ಞಾನ ಕ್ಷೇತ್ರಗಳಲ್ಲಿ ರಾಜ್ಯದ ಸಾಧನೆಗಳನ್ನು ವಿವರಿಸಿದರು. 1902ರಲ್ಲಿ ಕೋಲಾರ ಚಿನ್ನದ ಗಣಿಗಳಿಗೆ ವಿದ್ಯುತ್ ಪೂರೈಸಲು ಶಿವನಸಮುದ್ರದಲ್ಲಿ ಏಷ್ಯಾದಲ್ಲೇ ಮೊದಲ ಬಾರಿಗೆ ವಿದ್ಯುತ್ ಉತ್ಪಾದನೆ ಮಾಡಲಾಯಿತು. ಭಾರತದಲ್ಲೇ ಮೊದಲ ಬಾರಿಗೆ ವಿದ್ಯುದೀಕರಣಗೊಂಡ ನಗರ ಎಂಬ ಹೆಗ್ಗಳಿಕೆ ಬೆಂಗಳೂರಿಗಿದೆ. ಹಿಂದೂಸ್ತಾನ್ ಏರೋನಾಟಿಕ್ಸ್ ಲಿಮಿಟೆಡ್ ಮೂಲಕ ದೇಶದ ಮೊದಲ ವಿಮಾನ ತಯಾರಿಕಾ ಘಟಕ ಕರ್ನಾಟಕದಲ್ಲಿ ಸ್ಥಾಪನೆಯಾಯಿತು ಎಂದು ಅವರು ಸ್ಮರಿಸಿದರು.

ದೇಶದಲ್ಲೇ ಮೊದಲ ಬಾರಿಗೆ ಕೈಗಾರಿಕಾ ನೀತಿಯನ್ನು ರೂಪಿಸಿದ ರಾಜ್ಯ ಕರ್ನಾಟಕ. ಇದೇ ರೀತಿ ಪ್ರತ್ಯೇಕ ಸ್ಟಾರ್ಟ್‌ಅಪ್ ನೀತಿಯನ್ನು ಜಾರಿಗೆ ತಂದ ಮೊದಲ ರಾಜ್ಯವೂ ಕರ್ನಾಟಕವಾಗಿದೆ. ಟೆಕ್ಸಾಸ್ ಇನ್‌ಸ್ಟ್ರುಮೆಂಟ್ಸ್‌ನ ಭಾರತದ ಮೊದಲ ಜಾಗತಿಕ ಸಂಶೋಧನೆ ಮತ್ತು ಅಭಿವೃದ್ಧಿ ಕೇಂದ್ರ ಬೆಂಗಳೂರಿನಲ್ಲಿ ಆರಂಭವಾಯಿತು. ಭಾರತದ ಮೊದಲ ಐಫೋನ್ ಜೋಡಣೆ ಘಟಕವೂ ಬೆಂಗಳೂರಿನಲ್ಲಿ ಸ್ಥಾಪನೆಯಾಯಿತು ಎಂದು ಅವರು ಹೇಳಿದರು.

ತಂತ್ರಜ್ಞಾನ ಕ್ಷೇತ್ರದಲ್ಲಿನ ರಾಜ್ಯದ ಬೆಳವಣಿಗೆಯನ್ನು ಉಲ್ಲೇಖಿಸಿದ ಮುಖ್ಯಮಂತ್ರಿ, ವಿಶ್ವದಲ್ಲೇ ಎರಡನೇ ಅತಿ ದೊಡ್ಡ ಕೃತಕ ಬುದ್ಧಿಮತ್ತೆ ಮತ್ತು ಯಂತ್ರ ಕಲಿಕೆ ಪ್ರತಿಭಾ ಸಂಪನ್ಮೂಲ ಹೊಂದಿರುವ ನಗರವಾಗಿ ಬೆಂಗಳೂರು ಗುರುತಿಸಿಕೊಂಡಿದೆ.

ಬೀಜಿಂಗ್ ನಂತರ ಏಷ್ಯಾದ ಎರಡನೇ ಅತಿ ದೊಡ್ಡ ೦ಟ ಆಧಾರಿತ ತಂತ್ರಜ್ಞಾನ ಸಮೂಹವೂ ಬೆಂಗಳೂರಿನಲ್ಲಿದೆ. ದೇಶದ ಅತಿದೊಡ್ಡ ಚಿಪ್ ವಿನ್ಯಾಸ ಕೇಂದ್ರವೂ ಬೆಂಗಳೂರಿನಲ್ಲಿದೆ ಎಂದು ತಿಳಿಸಿದರು.

ರಾಜ್ಯದಾದ್ಯಂತ ಪ್ರತಿವರ್ಷ 1.5 ಲಕ್ಷಕ್ಕೂ ಹೆಚ್ಚು ಎಂಜಿನಿಯರ್‌ಗಳು ಪದವಿ ಪಡೆಯುತ್ತಿದ್ದಾರೆ. ಕರ್ನಾಟಕದ ಕೈಗಾರಿಕಾ ಉದ್ಯೋಗ ಕ್ಷೇತ್ರದಲ್ಲಿ ಮಹಿಳೆಯರ ಪಾಲ್ಗೊಳ್ಳುವಿಕೆ ಶೇ.37ರಷ್ಟಿದ್ದು, ಇದು ರಾಷ್ಟ್ರೀಯ ಸರಾಸರಿ ಶೇ.18ಕ್ಕಿಂತ ಗಣನೀಯವಾಗಿ ಹೆಚ್ಚಾಗಿದೆ ಎಂದರು.

ಒಟ್ಟಾರೆ ರಫ್ತು ಮತ್ತು ಪ್ರತಿಭಾ ಸಂಪನ್ಮೂಲದ ನಿವ್ವಳ ಹರಿವಿನಲ್ಲಿ ಕರ್ನಾಟಕ ದೇಶದಲ್ಲೇ ಮೊದಲ ಸ್ಥಾನದಲ್ಲಿದೆ. ಕಳೆದ ಐದು ವರ್ಷಗಳ ಒಟ್ಟು ಜಿಎಸ್‌ಟಿ ಸಂಗ್ರಹ ಮತ್ತು ವಿದೇಶಿ ನೇರ ಹೂಡಿಕೆಯಲ್ಲಿ ರಾಜ್ಯ ಎರಡನೇ ಸ್ಥಾನದಲ್ಲಿದೆ ಎಂದು ಹೇಳಿದರು.

ಬೆಂಗಳೂರಿನ ಮೂಲಸೌಕರ್ಯ ಅಭಿವೃದ್ಧಿಯ ಕುರಿತು ಮಾತನಾಡಿದ ಶಿವಕುಮಾರ್, ನಗರದ ಸಂಚಾರ ದಟ್ಟಣೆ ಸಮಸ್ಯೆ ಪರಿಹರಿಸಲು ರೂಪಿಸಿರುವ ಸಮಗ್ರ ಕಾರ್ಯ ತಂತ್ರದಲ್ಲಿ ಮೆಟ್ರೋ ಸಂಪರ್ಕ ಅತ್ಯಂತ ಪ್ರಮುಖ ಭಾಗವಾಗಿದೆ ಎಂದರು.

ಆದರೆ, ಮೆಟ್ರೋ ಯೋಜನೆಗಳು ಸಾಮಾನ್ಯವಾಗಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ನಡುವೆ ಶೇ.50:50ರ ಪಾಲುದಾರಿಕೆಯ ಆಧಾರದ ಮೇಲೆ ಆರಂಭವಾಗುತ್ತವೆ. ವಾಸ್ತವದಲ್ಲಿ ರಾಜ್ಯ ಸರ್ಕಾರಗಳ ಮೇಲಿನ ಆರ್ಥಿಕ ಹೊರೆ ಇದಕ್ಕಿಂತ ಹೆಚ್ಚಾಗಿರುತ್ತದೆ ಎಂದು ಅವರು ಗಮನ ಸೆಳೆದರು.

ಬೆಂಗಳೂರು ಮೆಟ್ರೋ ಯೋಜನೆಯಲ್ಲಿ ಭೂಸ್ವಾಧೀನ ವೆಚ್ಚ, ಉಪಯುಕ್ತ ಸೇವೆಗಳ ಸ್ಥಳಾಂತರ, ಕೇಂದ್ರ ತೆರಿಗೆಗಳ ಶೇ.50ರಷ್ಟು ಪಾಲು, ರಾಜ್ಯ ತೆರಿಗೆಗಳ ಶೇ.100ರಷ್ಟು ಹೊರೆ, ಸಂಪೂರ್ಣ ವಿದೇಶಿ ಸಾಲದ ಮರುಪಾವತಿ ಹಾಗೂ ಬಹುತೇಕ ವೆಚ್ಚ ಹೆಚ್ಚಳದ ಹೊಣೆಯನ್ನು ಕರ್ನಾಟಕವೇ ಭರಿಸುತ್ತಿದೆ ಎಂದು ವಿವರಿಸಿದರು.

"ಮೆಟ್ರೋದ ಪ್ರಯೋಜನವನ್ನು ಎಲ್ಲರೂ ಹಂಚಿಕೊಳ್ಳುತ್ತಾರೆ. ಹೀಗಿರುವಾಗ ಅದರ ಆರ್ಥಿಕ ಹೊಣೆಯನ್ನೂ ನ್ಯಾಯಯುತವಾಗಿ ಹಂಚಿಕೊಳ್ಳಬೇಕು" ಎಂದು ಅವರು ಹೇಳಿದರು. ಮೆಟ್ರೋ ಯೋಜನೆಗಳ ಯೋಜನೆ ರೂಪಿಸುವಿಕೆ, ಅನುಮೋದನೆ ಮತ್ತು ನಿರ್ಮಾಣದಲ್ಲಿನ ವಿಳಂಬವನ್ನು ನಿವಾರಿಸಲು ಕಾಲಮಿತಿಯೊಳಗೆ ಅನುಮೋದನೆ ನೀಡಬೇಕು. ಪ್ರಗತಿ ವ್ಯವಸ್ಥೆಯಡಿ ನಿಯಮಿತ ಪರಿಶೀಲನೆ ನಡೆಸಬೇಕು ಹಾಗೂ ಪ್ರಧಾನಮಂತ್ರಿಯವರು ನೇರವಾಗಿ ಗಮನಹರಿಸಬೇಕು ಎಂದು ಮನವಿ ಮಾಡಿದರು.

ಪ್ರತಿಯೊಂದು ನಗರದ ವಾಸ್ತವ ಪರಿಸ್ಥಿತಿಗೆ ಅನುಗುಣವಾಗಿ ಯೋಜನಾ ವೆಚ್ಚವನ್ನು ನಿರ್ಧರಿಸಬೇಕು. ಎಲ್ಲ ನಗರಗಳಿಗೂ ಒಂದೇ ರಾಷ್ಟ್ರೀಯ ಸರಾಸರಿಯನ್ನು ಅನ್ವಯಿಸುವುದು ಸೂಕ್ತವಲ್ಲ ಎಂದರು. ಸವಿಸ್ತಾರ ಯೋಜನಾ ವರದಿಗಳು ಕೇಂದ್ರದ ಅನುಮೋದನೆ ಪಡೆಯುವಷ್ಟರಲ್ಲಿ ಎರಡು– ಮೂರು ವರ್ಷಗಳಷ್ಟು ಹಳೆಯದಾಗಿರುತ್ತವೆ. ಆದ್ದರಿಂದ ಪ್ರಸ್ತುತ ಮಾರುಕಟ್ಟೆ ದರಗಳ ಆಧಾರದ ಮೇಲೆ ಅನುಮೋದನೆ ನೀಡಬೇಕು ಎಂದು ಹೇಳಿದರು.

ಅನುಮೋದನೆಯ ವಿಳಂಬದಿಂದ ಉಂಟಾಗುವ ಹೆಚ್ಚುವರಿ ವೆಚ್ಚವನ್ನು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ನ್ಯಾಯಯುತವಾಗಿ ಹಂಚಿಕೊಳ್ಳಬೇಕು. ಪ್ರತಿಯೊಂದು ಸರ್ಕಾರವೂ ತನ್ನ ಪಾಲಿನ ತೆರಿಗೆ ಹೊಣೆಯನ್ನು ಭರಿಸಬೇಕು ಎಂದು ಪ್ರಸ್ತಾಪಿಸಿದರು.

ಮೆಟ್ರೋ ಕಾರ್ಯಾಚರಣೆಯಲ್ಲಿನ ನಗದು ನಷ್ಟವನ್ನೂ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಹಂಚಿಕೊಳ್ಳಬೇಕು. ದೆಹಲಿ ಮೆಟ್ರೋ ಮಾದರಿಯಲ್ಲಿ ವಿದೇಶಿ ಸಾಲಗಳ ವಿನಿಮಯ ದರದ ಅಪಾಯವನ್ನೂ ಕೇಂದ್ರ ಸರ್ಕಾರ ಹಂಚಿಕೊಳ್ಳಬೇಕು ಎಂದು ಅವರು ಸಲಹೆ ನೀಡಿದರು.

ರಾಷ್ಟ್ರೀಯ ಹಣಕಾಸು ಸಂಸ್ಥೆಗಳ ಮೂಲಕ ಭಾರತೀಯ ರೂಪಾಯಿಗಳಲ್ಲೇ ಕೈಗೆಟುಕುವ ದೀರ್ಘಾವಧಿ ಸಾಲ ಒದಗಿಸುವ ವ್ಯವಸ್ಥೆ ರೂಪಿಸಬೇಕು. ದೇಶದ ಎಲ್ಲಾ ಮೆಟ್ರೋ ನಗರಗಳಿಗೆ ಅನುಕೂಲವಾಗುವಂತೆ ಒಂದೇ ರಾಷ್ಟ್ರೀಯ ತಾಂತ್ರಿಕ ಸಂಸ್ಥೆಯನ್ನು ಸ್ಥಾಪಿಸಬೇಕು ಎಂದು ಆಗ್ರಹಿಸಿದರು.

ಈ ಸಂಸ್ಥೆಯು ಅನುಮೋದಿತ ತಂತ್ರಜ್ಞಾನ ಮತ್ತು ವ್ಯವಸ್ಥೆಗಳ ಪಟ್ಟಿಯನ್ನು ಸಿದ್ಧಪಡಿಸಬೇಕು. ತಾಂತ್ರಿಕ ಸಮಿತಿಯ ಶಿಫಾರಸಿನ ಆಧಾರದ ಮೇಲೆ ಮೆಟ್ರೋ ಯೋಜನೆಗಳು ಈ ಪಟ್ಟಿಯಿಂದ ಸೂಕ್ತ ತಂತ್ರಜ್ಞಾನವನ್ನು ಆಯ್ಕೆ ಮಾಡಿಕೊಳ್ಳಬಹುದು. ಇದರಿಂದ ಅನುಮೋದನೆ ಪ್ರಕ್ರಿಯೆ ವೇಗಗೊಳ್ಳುವುದರ ಜೊತೆಗೆ ಸ್ವದೇಶಿ ತಂತ್ರಜ್ಞಾನಕ್ಕೆ ಉತ್ತೇಜನ ಮತ್ತು ಪ್ರಯಾಣಿಕರ ಸುರಕ್ಷತೆ ಖಚಿತವಾಗಲಿದೆ ಎಂದು ಹೇಳಿದರು.

ಮಾಜಿ ರಾಷ್ಟ್ರಪತಿ ಎ.ಪಿ.ಜೆ. ಅಬ್ದುಲ್ ಕಲಾಂ ಅವರ "ಕನಸು ಕಾಣಿರಿ, ಕನಸು ಕಾಣಿರಿ, ಕನಸು ಕಾಣಿರಿ" ಎಂಬ ಮಾತುಗಳನ್ನು ಉಲ್ಲೇಖಿಸಿದ ಅವರು, ಸೂಕ್ತ ಯೋಜನೆ ಮತ್ತು ಕಾಲಮಿತಿಯ ನಿರ್ಧಾರಗಳ ಮೂಲಕ ಈ ಕನಸನ್ನು ನನಸಾಗಿಸಬೇಕು ಎಂದರು. "ಉತ್ತಮ ಮೆಟ್ರೋ ಜಾಲ ಎಂದರೆ ಸಂಚಾರ ದಟ್ಟಣೆಯಲ್ಲಿ ಕಡಿಮೆ ಸಮಯ ಕಳೆಯುವುದು ಮತ್ತು ಕುಟುಂಬದೊಂದಿಗೆ ಹೆಚ್ಚು ಸಮಯ ಕಳೆಯಲು ಸಾಧ್ಯವಾಗುವುದು" ಎಂದು ಹೇಳಿದರು.



ಕಬ್ಬು ಬೆಳೆಗಾರರ ಬೇಡಿಕೆ ಪ್ರಸ್ತಾಪಿಸಿದ ಸಿಎಂ

ಕರ್ನಾಟಕದ ಕಬ್ಬು ಬೆಳೆಗಾರರು ಎದುರಿಸುತ್ತಿರುವ ಸಮಸ್ಯೆಗಳನ್ನೂ ಮುಖ್ಯಮಂತ್ರಿ ಪ್ರಧಾನಮಂತ್ರಿಯವರ ಗಮನಕ್ಕೆ ತಂದರು. 2026–27ನೇ ಸಾಲಿಗೆ ಪ್ರತಿ ಟನ್ ಕಬ್ಬಿಗೆ ನಿಗದಿಪಡಿಸಿರುವ ನ್ಯಾಯಸಮ್ಮತ ಮತ್ತು ಲಾಭದಾಯಕ ಬೆಲೆ ರೂ. 3,650 ಆಗಿದ್ದು, ರೈತರು ಪ್ರತಿ ಟನ್‌ಗೆ ರೂ. 5,500 ನೀಡಬೇಕೆಂದು ಒತ್ತಾಯಿಸುತ್ತಿದ್ದಾರೆ ಎಂದು ಹೇಳಿದರು.

2019ರಿಂದ ಸಕ್ಕರೆಯ ಕನಿಷ್ಠ ಬೆಂಬಲ ಬೆಲೆ ಪ್ರತಿ ಕೆ.ಜಿ.ಗೆ ರೂ.31ರಲ್ಲೇ ಸ್ಥಿರವಾಗಿದೆ. ಕರ್ನಾಟಕಕ್ಕೆ ಎಥೆನಾಲ್ ಹಂಚಿಕೆಯಲ್ಲೂ ನ್ಯಾಯಯುತ ಪಾಲು ನೀಡಬೇಕು ಎಂದು ಅವರು ಆಗ್ರಹಿಸಿದರು.

ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ನಡುವೆ ಹೆಚ್ಚಿನ ಸಹಕಾರದ ಅಗತ್ಯವನ್ನು ಒತ್ತಿಹೇಳಿದ ಶಿವಕುಮಾರ್, ಕರ್ನಾಟಕವು ತನ್ನ ಜವಾಬ್ದಾರಿಗಳನ್ನು ಸಮರ್ಥವಾಗಿ ನಿರ್ವಹಿಸುವುದರ ಜೊತೆಗೆ ಕೇಂದ್ರ ಸರ್ಕಾರದೊಂದಿಗೆ ನಿಕಟವಾಗಿ ಕಾರ್ಯನಿರ್ವಹಿಸಲು ಸಿದ್ಧವಿದೆ ಎಂದರು. ಬಸವಣ್ಣನವರ "ಕಾಯಕವೇ ಕೈಲಾಸ" ಎಂಬ ತತ್ವ ಹಾಗೂ ಭಗವದ್ಗೀತೆಯ ಕರ್ತವ್ಯ ನಿಷ್ಠೆಯ ಸಂದೇಶವನ್ನು ಉಲ್ಲೇಖಿಸಿದ ಅವರು, ಪಿಂಕ್ ಲೈನ್ ಉದ್ಘಾಟನೆಯು ಸಾವಿರಾರು ಎಂಜಿನಿಯರ್‌ಗಳು, ಕಾರ್ಮಿಕರು ಮತ್ತು ಅಧಿಕಾರಿಗಳ ಪರಿಶ್ರಮ ಹಾಗೂ ಸಮರ್ಪಣೆಯ ಪ್ರತೀಕವಾಗಿದೆ ಎಂದರು.

ಕುವೆಂಪು ಅವರ ವಿಶ್ವಮಾನವ ಸಂದೇಶವನ್ನು ಸ್ಮರಿಸಿದ ಅವರು, ಸಂಕುಚಿತ ಗಡಿಗಳನ್ನು ಮೀರಿ ಎಲ್ಲರ ಕಲ್ಯಾಣಕ್ಕಾಗಿ ಸರ್ಕಾರಗಳು ಕೆಲಸ ಮಾಡಬೇಕು ಎಂದು ಹೇಳಿದರು.

"ಮೆಟ್ರೋ ಮಾರ್ಗವು ಎರಡು ಸ್ಥಳಗಳನ್ನು ಸಂಪರ್ಕಿಸುತ್ತದೆ. ಆದರೆ, ಸಹಕಾರವು ಸರ್ಕಾರಗಳು ಮತ್ತು ಜನರನ್ನು ಸಂಪರ್ಕಿಸುತ್ತದೆ. ಕೇಂದ್ರ ಮತ್ತು ರಾಜ್ಯಗಳು ಒಟ್ಟಾಗಿ ಸಾಗಿದಾಗ ಮಾತ್ರ ರಾಷ್ಟ್ರ ಪ್ರಗತಿಯತ್ತ ಮುನ್ನಡೆಯುತ್ತದೆ" ಎಂದು ಹೇಳಿದರು.

ಜನರ ಜನಾದೇಶವು ರಾಜಕೀಯ ಪಕ್ಷಗಳಿಗೆ ಆಡಳಿತ ನಡೆಸುವ ಜವಾಬ್ದಾರಿಯನ್ನು ನೀಡುತ್ತದೆ. ಆದರೆ, ಜನರ ಸೇವೆ ಮಾಡುವುದು ಮತ್ತು ದೇಶದ ಪ್ರತಿಯೊಬ್ಬ ನಾಗರಿಕನ ಜೀವನವನ್ನು ಉತ್ತಮಗೊಳಿಸುವುದೇ ಆ ಜವಾಬ್ದಾರಿಯ ಅಂತಿಮ ಗುರಿಯಾಗಿರಬೇಕು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಮ್ಮ ಭಾಷಣದ ಕೊನೆಯಲ್ಲಿ ಹೇಳಿದರು.

■ ಸುದ್ದಿ ಚುಟುಕು

ಎತ್ತಿನಹೊಳೆ ಯೋಜನೆಗೆ ಕೇಂದ್ರ ತಕರಾರು!

● ವಿಕ್ರಮ ವಾಹಿನಿ । ನವದೆಹಲಿ

ಬಹುಕೋಟಿ ರೂಪಾಯಿ ವೆಚ್ಚದ ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಗೆ ಮತ್ತೆ ಕೇಂದ್ರ ಅರಣ್ಯ ಸಚಿವಾಲಯದ ಆಕ್ಷೇಪ ಎದುರಾಗಿದೆ. ಯೋಜನೆಯ ಕಾಮಗಾರಿಗಾಗಿ ಸಕಲೇಶಪುರ ತಾಲ್ಲೂಕಿನ 35 ಎಕರೆ ಅರಣ್ಯ ಪ್ರದೇಶ ಬಳಕೆಗೆ ಹಾಗೂ ಪರಿಹಾರಾತ್ಮಕ ಅರಣ್ಯೀಕರಣಕ್ಕೆ ಅನುಮತಿ ಕೋರಿ ರಾಜ್ಯ ಜಲಸಂಪನ್ಮೂಲ ಇಲಾಖೆ ಸಲ್ಲಿಸಿದ್ದ ಪ್ರಸ್ತಾವನೆಗೆ ಕೇಂದ್ರ ಅರಣ್ಯ ಸಚಿವಾಲಯದ ಪ್ರಾದೇಶಿಕ ಉನ್ನತಾಧಿಕಾರ ಸಮಿತಿ (ಆರ್‌ಇಸಿ) ಸಮ್ಮತಿ ನೀಡಲು ನಿರಾಕರಿಸಿದೆ.

ಎತ್ತಿನಹೊಳೆ ಯೋಜನೆಗಾಗಿ ಹಾಸನ ಮತ್ತು ತುಮಕೂರು ಜಿಲ್ಲೆಗಳ ವ್ಯಾಪ್ತಿಯಲ್ಲಿ 272 ಎಕರೆ ಅರಣ್ಯ ಭೂಮಿಯನ್ನು ಬಳಸುವ ರಾಜ್ಯದ ಪ್ರಸ್ತಾವನೆಗೆ ಈ ಹಿಂದೆ ಕೇಂದ್ರ ಸಚಿವಾಲಯ ಆಕ್ಷೇಪ ವ್ಯಕ್ತಪಡಿಸಿತ್ತು. ಬಳಿಕ ಭಾರಿ ಮೊತ್ತದ ದಂಡ ವಿಧಿಸಿ ತಾತ್ವಿಕ ಅನುಮೋದನೆ ನೀಡಲಾಗಿತ್ತು. ಇದೀಗ ಸಕಲೇಶಪುರ ತಾಲ್ಲೂಕಿನ ವಿವಿಧ ಸರ್ವೆ ಸಂಖ್ಯೆಗಳಲ್ಲಿರುವ 35 ಎಕರೆ ಅರಣ್ಯ ಭೂಮಿಯನ್ನು ಬಳಸಲು ಘಟನೋತ್ತರ ಅನುಮೋದನೆ ಪಡೆಯುವ ಉದ್ದೇಶದಿಂದ ರಾಜ್ಯ ಸರ್ಕಾರ ಪ್ರಸ್ತಾವನೆ ಸಲ್ಲಿಸಿತ್ತು. ಇದರೊಂದಿಗೆ ಪರಿಹಾರಾತ್ಮಕ ಅರಣ್ಯೀಕರಣದ ಪ್ರಸ್ತಾವನೆಯನ್ನೂ ಮುಂದಿಟ್ಟಿತ್ತು.

ಆದರೆ, ಕಳೆದ ವಾರ ನಡೆದ ಆರ್‌ಇಸಿ ಸಭೆಯಲ್ಲಿ ಎರಡೂ ಪ್ರಸ್ತಾವನೆಗಳಿಗೆ ಅನುಮೋದನೆ ನೀಡಲು ನಿರಾಕರಿಸಲಾಗಿದೆ. ಯೋಜನೆಯ ಸ್ಥಳಕ್ಕೆ ಅಧಿಕಾರಿಗಳ ತಂಡ ಭೇಟಿ ನೀಡಿ ಪರಿಶೀಲನೆ ನಡೆಸಿದ ಬಳಿಕ ಮುಂದಿನ ತೀರ್ಮಾನ ಕೈಗೊಳ್ಳಲು ಸಮಿತಿ ನಿರ್ಧರಿಸಿದೆ. ಅಲ್ಲದೆ, ಪರಿಹಾರಾತ್ಮಕ ಅರಣ್ಯೀಕರಣಕ್ಕಾಗಿ ಗುರುತಿಸಿರುವ ಭೂಮಿಯ ಕುರಿತು ಸಮಗ್ರ ಸ್ಪಷ್ಟನೆ ನೀಡುವಂತೆ ಅರಣ್ಯ ಇಲಾಖೆಗೆ ಸೂಚಿಸಿದೆ.

ಪರಿಹಾರಾತ್ಮಕ ಅರಣ್ಯೀಕರಣಕ್ಕಾಗಿ ಹಾಸನ ಜಿಲ್ಲೆಯ ಅರಸೀಕೆರೆ ತಾಲ್ಲೂಕಿನ ಬಾಗೇಶಪುರದ ಸರ್ವೆ ಸಂಖ್ಯೆಯಲ್ಲಿರುವ ಜಾಗವನ್ನು ಗುರುತಿಸಲಾಗಿದೆ.

ಆದರೆ, ಈ ಜಾಗವನ್ನು 2017ರಲ್ಲಿಯೇ ಅರಣ್ಯ ಇಲಾಖೆಯ ಹೆಸರಿಗೆ ಮ್ಯುಟೇಷನ್ ಮಾಡಲಾಗಿದ್ದು, 2018–19ರಲ್ಲಿ ಕಾಂಪಾ (ಅಂಒಕಂ) ಅನುದಾನ ಬಳಸಿಕೊಂಡು ಅರಣ್ಯೀಕರಣ ಕಾರ್ಯವನ್ನೂ ಕೈಗೊಳ್ಳಲಾಗಿದೆ. ಅಲ್ಲದೆ, 2022ರಲ್ಲಿ ಈ ಪ್ರದೇಶವನ್ನು ಮೀಸಲು ಅರಣ್ಯವೆಂದು ಅಧಿಸೂಚಿಸಲಾಗಿದೆ. ಹೀಗಿರುವಾಗ, ಈಗ ಇದೇ ಜಾಗವನ್ನು ಪರಿಹಾರಾತ್ಮಕ ಅರಣ್ಯೀಕರಣಕ್ಕೆ ಹೇಗೆ ಪರಿಗಣಿಸಲಾಗಿದೆ ಎಂಬ ಬಗ್ಗೆ ವಿವರಣೆ ನೀಡುವಂತೆ ಸಮಿತಿ ಸೂಚಿಸಿದೆ.

ಇನ್ನೊಂದೆಡೆ, ಎತ್ತಿನಹೊಳೆ ಯೋಜನೆಗೆ ಈ ಹಿಂದೆ ಕೇಂದ್ರ ಸಚಿವಾಲಯ ಅನುಮೋದನೆ ನೀಡಿದ್ದ ಪ್ರಮಾಣಕ್ಕಿಂತ ಹೆಚ್ಚಿನ ಅರಣ್ಯ ಭೂಮಿಯನ್ನು ಬಳಸಿರುವುದು ಹಾಗೂ ಈ ಪ್ರಕ್ರಿಯೆಯಲ್ಲಿ ನಿಯಮ ಉಲ್ಲಂಘನೆಯಾಗಿರುವುದನ್ನು ಸಮಿತಿ ಗಂಭೀರವಾಗಿ ಪರಿಗಣಿಸಿದೆ. ಇದಕ್ಕೆ ಕಾರಣರಾದ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಂಡು ವರದಿ ಸಲ್ಲಿಸುವಂತೆ ಈ ಹಿಂದೆಯೇ ನಿರ್ದೇಶನ ನೀಡಲಾಗಿತ್ತು. ಆದರೆ, ಈವರೆಗೆ ರಾಜ್ಯ ಸರ್ಕಾರದಿಂದ ಸಮರ್ಪಕ ಉತ್ತರ ಸಲ್ಲಿಕೆಯಾಗಿಲ್ಲ ಎಂದು ಸಭೆಯ ನಡಾವಳಿಯಲ್ಲಿ ಅಸಮಾಧಾನ ವ್ಯಕ್ತಪಡಿಸಲಾಗಿದೆ.

ಹೀಗಾಗಿ, ಅರಣ್ಯ ಭೂಮಿ ಬಳಕೆಯಲ್ಲಿನ ಲೋಪಗಳು, ಪರಿಹಾರಾತ್ಮಕ ಅರಣ್ಯೀಕರಣಕ್ಕೆ ಗುರುತಿಸಿರುವ ಜಾಗದ ಅರ್ಹತೆ ಹಾಗೂ ಅಧಿಕಾರಿಗಳ ವಿರುದ್ಧದ ಕ್ರಮಗಳ ಕುರಿತು ರಾಜ್ಯ ಸರ್ಕಾರ ಸ್ಪಷ್ಟನೆ ನೀಡಬೇಕಾದ ಅನಿವಾರ್ಯತೆ ಎದುರಾಗಿದೆ. ಕೇಂದ್ರದ ಆಕ್ಷೇಪಗಳಿಂದಾಗಿ ಎತ್ತಿನಹೊಳೆ ಯೋಜನೆಯ ಅರಣ್ಯ ಅನುಮತಿ ಪ್ರಕ್ರಿಯೆ ಮತ್ತಷ್ಟು ವಿಳಂಬವಾಗುವ ಸಾಧ್ಯತೆ ಇದೆ.

'ಮೇಕೆದಾಟು ಯೋಜನೆಗೆ ಅನುಮತಿ ನೀಡಿ, ಕಸ್ತೂರಿ ರಂಗನ್ ವರದಿ ಹಿಂಪಡೆಯಿರಿ'

| ಪುಟ 4

ಶಿಕ್ಷಕರ ವರ್ಗಾವಣೆ ನಿಯಮಗಳ ಕರಡು ಅಧಿಸೂಚನೆ ಪ್ರಕಟ: ಆಕ್ಷೇಪಣೆಗೆ 15 ದಿನ ಅವಕಾಶ

● ವಿಕ್ರಮ ವಾಹಿನಿ । ಬೆಂಗಳೂರು

ಶಿಕ್ಷಕರ ವರ್ಗಾವಣೆ ನಿಯಮಗಳಿಗೆ ತಿದ್ದುಪಡಿ ತರಲು ರಾಜ್ಯ ಸರ್ಕಾರ ಕರಡು ಅಧಿಸೂಚನೆ ಹೊರಡಿಸಿದೆ. 2020ರ ಶಿಕ್ಷಕರ ವರ್ಗಾವಣೆ ನಿಯಮಗಳಲ್ಲಿ ಬದಲಾವಣೆ ಪ್ರಸ್ತಾಪಿಸಿರುವ ಸರ್ಕಾರ, ಕರಡು ಅಧಿಸೂಚನೆ ಕುರಿತು ಸಾರ್ವಜನಿಕರು ಆಕ್ಷೇಪಣೆ ಹಾಗೂ ಸಲಹೆಗಳನ್ನು ಸಲ್ಲಿಸಲು 15 ದಿನಗಳ ಕಾಲಾವಕಾಶ ನೀಡಿದೆ. ಹೊಸ ಕರಡು ನಿಯಮಗಳ ಪ್ರಕಾರ, ವರ್ಗಾವಣೆ ಬಯಸುವ ಶಿಕ್ಷಕರಿಗೆ 'ಸಿ', 'ಬಿ' ಮತ್ತು 'ಎ' ವಲಯಗಳಲ್ಲಿ ಸಲ್ಲಿಸಿರುವ ಸೇವೆ ಹಾಗೂ ಪ್ರಸ್ತುತ ಶಾಲೆಯಲ್ಲಿ ಕಾರ್ಯನಿರ್ವಹಿಸಿರುವ ವರ್ಷಗಳ ಆಧಾರದ ಮೇಲೆ ಭಾರ ಅಂಕಗಳನ್ನು ಲೆಕ್ಕಹಾಕಲು ಹೊಸ ಸೂತ್ರ ರೂಪಿಸಲಾಗಿದೆ. ವರ್ಗಾವಣೆ ಪ್ರಕ್ರಿಯೆಯಲ್ಲಿ ಜಿಲ್ಲೆಯೊಳಗೆ ಶೇ.7, ವಿಭಾಗದೊಳಗೆ ಶೇ.2, ವಿಭಾಗದ ಹೊರಗೆ ಶೇ.2 ಹಾಗೂ ವಲಯ ವರ್ಗಾವಣೆಗೆ ಶೇ.4ರಷ್ಟು ಮಿತಿಯನ್ನು ನಿಗದಿಪಡಿಸಲಾಗಿದೆ. ಮಾರಣಾಂತಿಕ ಕಾಯಿಲೆಗಳಿಂದ ಬಳಲುತ್ತಿರುವವರು ಅಥವಾ ಶೇ.40ಕ್ಕಿಂತ ಹೆಚ್ಚಿನ ಅಂಗವೈಕಲ್ಯ ಹೊಂದಿರುವ ಶಿಕ್ಷಕರು ವರ್ಗಾವಣೆ ಕೋರುವ ಸಂದರ್ಭದಲ್ಲಿ ಪರಿಶೀಲನಾ ಪತ್ರ ಸಲ್ಲಿಸುವುದನ್ನು ಕಡ್ಡಾಯಗೊಳಿಸಲಾಗಿದೆ. ಶೈಕ್ಷಣಿಕ ಬ್ಲಾಕ್ ಮತ್ತು ವಿಭಾಗ ಮಟ್ಟದಲ್ಲಿ ಲಭ್ಯವಿರುವ ನಿರ್ಣಾಯಕ ಖಾಲಿ ಹುದ್ದೆಗಳನ್ನು ಕೆಲವು ನಿರ್ದಿಷ್ಟ ಆದ್ಯತೆಗಳನ್ನು ಹೊರತುಪಡಿಸಿ ಮೊದಲು ಭರ್ತಿ ಮಾಡಲು ಅವಕಾಶ ಕಲ್ಪಿಸಲಾಗಿದೆ. ಪ್ರಾಥಮಿಕ ಮತ್ತು ಪ್ರೌಢಶಾಲಾ ವಿಭಾಗಗಳ ವಿವಿಧ ವೃಂದಗಳ ಶಿಕ್ಷಕರಿಗೆ ತಂತ್ರಾಂಶದ ಮೂಲಕ ವೃಂದವಾರು ಆನ್‌ಲೈನ್ ಸಮಾಲೋಚನೆ ನಡೆಸಿ ವರ್ಗಾವಣೆ ಪ್ರಕ್ರಿಯೆ ಪೂರ್ಣಗೊಳಿಸಲು ಕರಡು ನಿಯಮಗಳಲ್ಲಿ ಪ್ರಸ್ತಾಪಿಸಲಾಗಿದೆ. ಇನ್ನು, ಒಂದು ಶಾಲೆಯಲ್ಲಿ ನಿರ್ದಿಷ್ಟ ಹುದ್ದೆ ಅನಗತ್ಯ ಅಥವಾ ಹೆಚ್ಚುವರಿ ಎಂದು ಗುರುತಿಸಿ ಆ ಹುದ್ದೆಯನ್ನು ಸ್ಥಳಾಂತರಿಸಿದರೆ, ಅಂತಹ ಹುದ್ದೆಯಲ್ಲಿರುವ ಶಿಕ್ಷಕರಿಗೆ ವರ್ಗಾವಣೆ ಪ್ರಕ್ರಿಯೆಯಲ್ಲಿ ಯಾವುದೇ ವಿನಾಯಿತಿ ನೀಡಲಾಗುವುದಿಲ್ಲ ಎಂದು ಕರಡು ಅಧಿಸೂಚನೆಯಲ್ಲಿ ತಿಳಿಸಲಾಗಿದೆ.

PRGI NO: KARKAN/2018/78481

ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ

ವಿಕ್ರಮ ವಾಹಿನಿ

ನಡುರಸ್ತೆಯಲ್ಲೇ ಪತ್ನಿ ಎದುರೇ ರಿಯಲ್ ಎಸ್ಟೇಟ್ ಉದ್ಯಮಿ ಬರ್ಬರ ಹತ್ಯೆ


● ವಿಕ್ರಮ ವಾಹಿನಿ । ಬೆಂಗಳೂರು

ಹಾಡಹಗಲೇ ರಿಯಲ್ ಎಸ್ಟೇಟ್ ಉದ್ಯಮಿಯನ್ನು ನಡು ರಸ್ತೆಯಲ್ಲೇ ಪತ್ನಿ ಕಣ್ಮುಂದೆಯೇ ದುಷ್ಕರ್ಮಿಗಳು ಬರ್ಬರವಾಗಿ ಹತ್ಯೆ ಮಾಡಿರುವ ಭೀಕರ ಘಟನೆ ಯಲಹಂಕ ಉಪನಗರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಶುಕ್ರವಾರ ಬೆಳಗ್ಗೆ ನಡೆದಿದೆ.

ಯಲಹಂಕದ ಕೋಗಿಲು ಕ್ರಾಸ್ ನಿವಾಸಿ ಚರಣ್ (40) ಹತ್ಯೆಗೀಡಾದ ರಿಯಲ್ ಎಸ್ಟೇಟ್ ಉದ್ಯಮಿ. ಇವರು ಮೂಲತಃ ರಾಮನಗರ ಜಿಲ್ಲೆ ಚನ್ನಪಟ್ಟಣ ತಾಲ್ಲೂಕಿನವರು.

ಕಳೆದ ಹತ್ತು ವರ್ಷಗಳಿಂದ ರಿಯಲ್ ಎಸ್ಟೇಟ್ ವ್ಯವಹಾರ ನಡೆಸುತ್ತಿದ್ದ ಚರಣ್ ಅವರು ಯಲಹಂಕ ನ್ಯೂಟೌನ್ 1ನೇ ಹಂತ, ಅಂಬೇಡ್ಕರ್ ನಗರದ ಪಂಜಾಬ್ ನ್ಯಾಷನಲ್ ಬ್ಯಾಂಕ್ ಶಾಖೆ ಇರುವ ಕಟ್ಟಡದ 2ನೇ ಮಹಡಿಯಲ್ಲಿ ಧಣಿ ಪ್ರಾಪರ್ಟೀಸ್ ಎಂಬ ರಿಯಲ್ ಎಸ್ಟೇಟ್ ಕಚೇರಿ ಹೊಂದಿದ್ದಾರೆ.

ಶುಕ್ರವಾರ ಬೆಳಗ್ಗೆ ಮನೆಯಿಂದ ಚರಣ್ ಅವರು ಪತ್ನಿಯೊಂದಿಗೆ ಕಾರಿನಲ್ಲಿ ಹೊರಟು ತಮ ಕಚೇರಿ ಬಳಿ 10 ಗಂಟೆ ಸುಮಾರಿಗೆ ಬಂದಿದ್ದಾರೆ. ಕಾರು ಇಳಿದು ಪತ್ನಿ ಮೆಟ್ಟಿಲು ಹತ್ತಿಕೊಂಡು ಕಚೇರಿಗೆ ಹೋಗುತ್ತಿದ್ದರು. ಚರಣ್ ಅವರು ಕಾರಿನಿಂದ ಹೊರ ಬರುತ್ತಿದ್ದಂತೆ ಇದೇ



ಸಮಯಕ್ಕಾಗಿ ಹೊಂಚು ಹಾಕಿದ್ದ ಇಬ್ಬರು ದುಷ್ಕರ್ಮಿಗಳು ಬೈಕ್‌ನಲ್ಲಿ ಬಂದು ಮಾರಕಾಸ್ತ್ರಗಳಿಂದ ಮನಬಂದಂತೆ ಹಲ್ಲೆ ನಡೆಸಿದ್ದಾರೆ.

ಪತಿಯ ಕಿರುಚಾಟ ಕೇಳಿ ಪತ್ನಿ ಸಹಾಯಕ್ಕಾಗಿ ಬಂದು ಹೊಡೆಯದಂತೆ ಬೇಡಿಕೊಂಡರಾದರೂ ಹಂತಕರು ಹಲ್ಲೆ ನಡೆಸಿ ಪರಾರಿಯಾಗಿದ್ದಾರೆ. ರಕ್ತದ ಮಡುವಿನಲ್ಲಿ ಬಿದ್ದಿದ್ದ ಚರಣ್ ಅವರನ್ನು ಪತ್ನಿ ಸ್ಥಳೀಯರ ಸಹಾಯದಿಂದ ಕಾರಿನಲ್ಲಿ ಆಸ್ಪತ್ರೆಗೆ ಕರೆದೊಯ್ದಿದ್ದಾರೆ. ತಕ್ಷಣ ವೈದ್ಯರು ಪರೀಕ್ಷಿಸಿ ಮಾರ್ಗಮಧ್ಯೆ ಮೃತಪಟ್ಟಿರುವುದಾಗಿ ತಿಳಿಸಿದ್ದಾರೆ. ಪತಿಯ ಸಾವನ್ನು ಕಂಡು ಪತ್ನಿ ಸ್ಥಳದಲ್ಲೇ ಕುಸಿದು ಕಣ್ಣೀರು ಹಾಕಿದ್ದಾರೆ. ಹಾಡಹಗಲೇ ಈ ಘಟನೆ ಕಂಡು ಸ್ಥಳೀಯರು ಬೆಚ್ಚಿಬಿದ್ದಿದ್ದಾರೆ.

ಸುದ್ದಿ ತಿಳಿದು ಯಲಹಂಕ ನ್ಯೂಟೌನ್ ಠಾಣೆ ಪೊಲೀಸರು ಸ್ಥಳಕ್ಕೆ ದೌಡಾಯಿಸಿ ಪರಿಶೀಲಿಸಿದ್ದಾರೆ. ನಂತರ ಮೃತದೇಹವನ್ನು ಯಲಹಂಕ ಸರ್ಕಾರಿ ಆಸ್ಪತ್ರೆಗೆ ರವಾನಿಸಲಾಗಿದೆ.

ವಿಶೇಷ ತಂಡ ರಚನೆ: ಹಂತಕರ ಪತ್ತೆಗೆ ವಿಶೇಷ ತಂಡಗಳನ್ನು ರಚಿಸಲಾಗಿದೆ. ಕೊಲೆಯಾದ ಚರಣ್ ಅವರ ಪತ್ನಿಯಿಂದ ಹಂತಕರ ಬಗ್ಗೆ ಮಾಹಿತಿಗಳನ್ನು ಪಡೆದು ಕೊಂಡಿದ್ದಾರೆ.

ರಿಯಲ್ ಎಸ್ಟೇಟ್, ಜಮೀನು, ಸೈಟ್ ವ್ಯವಹಾರದ ವಿಚಾರವಾಗಿ ಉಂಟಾದ ವೈಷಮ್ಯದಿಂದ ಚರಣ್ ಅವರ ಕೊಲೆ ನಡೆದಿರುವ ಅನುಮಾನ ವ್ಯಕ್ತವಾಗಿದೆ.

ಸುಪಾರಿ ಕೊಟ್ಟು ಈ ಕೊಲೆ ಮಾಡಿಸಿರುವ ಶಂಕೆ ಹಿನ್ನಲೆಯಲ್ಲಿ ಪೊಲೀಸರು ವಿವಿಧ ಆಯಾಮಗಳಲ್ಲಿ ತನಿಖೆ ನಡೆಸಿ ಇನ್ನಷ್ಟು ಮಾಹಿತಿಗಳನ್ನು ಕಲೆಹಾಕುತ್ತಿದ್ದಾರೆ.

ಹಂತಕರು 22 ರಿಂದ 23 ವರ್ಷದ ವಯಸ್ಸಿನವರು ಎಂಬುವುದು ಗೊತ್ತಾಗಿದೆ. ಹಂತಕರು ಕೆಲವೇ ಸೆಕೆಂಡ್‌ಗಳಲ್ಲಿ ಕೊಲೆ ಮಾಡಿ ಪರಾರಿಯಾಗಿದ್ದಾರೆ.

ಘಟನಾ ಸ್ಥಳದ ಸುತ್ತಮುತ್ತಲಿನ ರಸ್ತೆಗಳಲ್ಲಿರುವ ಸಿಸಿ ಕ್ಯಾಮೆರಾಗಳನ್ನು ಪೊಲೀಸರು ಪರಿಶೀಲಿ ಸುತ್ತಿದ್ದು, ಅದರಲ್ಲಿ ಸೆರೆಯಾಗಿರುವ ದೃಶ್ಯಾವಳಿ ಗಳನ್ನಾಧರಿಸಿ ಹಂತಕರ ಪತ್ತೆಗೆ ಪೋಲಿಸರು ಬಲೆ ಬೀಸಿದ್ದಾರೆ.

ಕರ್ನಾಟಕದಲ್ಲಿ ರೂ. 52,000 ಕೋಟಿ ರೂ. ರೈಲ್ವೆ ಯೋಜನೆಗಳು ಪ್ರಗತಿಯಲ್ಲಿವೆ: ವಿ. ಸೋಮಣ್ಣ



● ವಿಕ್ರಮ ವಾಹಿನಿ । ಬೆಂಗಳೂರು

ಪ್ರಧಾನಿ ನರೇಂದ್ರ ಮೋದಿ ಅವರು ಬೆಂಗಳೂರಿನ ಐಐಎಂ ಸಭಾಂಗಣದಿಂದ ವಿಡಿಯೋ ಕಾನ್ಫರೆನ್ಸ್ ಮೂಲಕ ಬೆಂಗಳೂರು–ಮಂಗಳೂರು–ಮಡಗಾಂವ್ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲು ಸೇವೆಗೆ ಹಸಿರು ನಿಶಾನೆ ತೋರಿದರು. ಇದೇ ಸಂದರ್ಭದಲ್ಲಿ ಕರ್ನಾಟಕದ ವಿವಿಧ ರೈಲ್ವೆ ಅಭಿವೃದ್ಧಿ ಯೋಜನೆಗಳನ್ನು ಉದ್ಘಾಟಿಸಿ, ರಾಷ್ಟ್ರಕ್ಕೆ ಸಮರ್ಪಿಸಿದರು.

ಅಮೃತ ಭಾರತ್ ಸ್ಟೇಷನ್ ಯೋಜನೆಯಡಿ ಪುನರಾಭಿವೃದ್ಧಿಗೊಳಿಸಲಾದ ಚಾಮರಾಜನಗರ, ಚಿಕ್ಕಮಗಳೂರು, ಸಕಲೇಶಪುರ ಮತ್ತು ಸುಬ್ರಹ್ಮಣ್ಯ ರೋಡ್ ರೈಲ್ವೆ ನಿಲ್ದಾಣಗಳನ್ನು ಪ್ರಧಾನಿ ಉದ್ಘಾಟಿಸಿದರು. ಅಲ್ಲದೆ, 45 ಕಿ.ಮೀ. ಉದ್ದದ ಬಾಗಲಕೋಟೆ–ವಂದಾಲ ಜೋಡಿ ರೈಲು ಮಾರ್ಗ ಹಾಗೂ ಸಕಲೇಶಪುರ– ಸುಬ್ರಹ್ಮಣ್ಯ ರೋಡ್ ನಡುವಿನ ರೈಲು ಮಾರ್ಗದ ವಿದ್ಯುದೀಕರಣ ಕಾಮಗಾರಿಯನ್ನು ಲೋಕಾರ್ಪಣೆಗೊಳಿಸಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಸಚಿವ ವಿ. ಸೋಮಣ್ಣ, ಪ್ರಧಾನಿ ನರೇಂದ್ರ ಮೋದಿ ಅವರ ದೂರದೃಷ್ಟಿಯ ನಾಯಕತ್ವದಲ್ಲಿ ಭಾರತೀಯ ರೈಲ್ವೆ ಮಹತ್ತರ ಪರಿವರ್ತನೆಯ ಹಾದಿಯಲ್ಲಿ ಸಾಗುತ್ತಿದೆ ಎಂದರು. 2026–27ನೇ ಸಾಲಿನ ಕೇಂದ್ರ ಬಜೆಟ್‌ನಲ್ಲಿ ಭಾರತೀಯ ರೈಲ್ವೆಗೆ ರೂ. 2.93 ಲಕ್ಷ ಕೋಟಿ ಅನುದಾನ ಮೀಸಲಿಡಲಾಗಿದ್ದು, ಕರ್ನಾಟಕದಲ್ಲಿ ಸುಮಾರು ರೂ. 52,000 ಕೋಟಿ ಮೊತ್ತದ ರೈಲ್ವೆ ಯೋಜನೆಗಳು ಪ್ರಗತಿಯಲ್ಲಿವೆ ಎಂದು ತಿಳಿಸಿದರು.

ಈಗಾಗಲೇ ಘೋಷಿಸಲಾಗಿರುವ ಏಳು ಹೈಸ್ಪೀಡ್ ರೈಲು ಕಾರಿಡಾರ್‌ಗಳ ಜತೆಗೆ ಬೆಂಗಳೂರು–ಪುಣೆ ಹೈಸ್ಪೀಡ್ ರೈಲು ಕಾರಿಡಾರ್ ಯೋಜನೆಯನ್ನೂ ಕೈಗೆತ್ತಿಕೊಳ್ಳಲಾಗುವುದು. ಬೆಂಗಳೂರು–ಮಂಗಳೂರು–ಮಡಗಾಂವ್ ವಂದೇ ಭಾರತ್ ರೈಲು ಸೇವೆಯು ಕರಾವಳಿ ಭಾಗದ ಜನರು ಹಾಗೂ ಜನಪ್ರತಿನಿಧಿಗಳ ಬಹುದಿನಗಳ ಬೇಡಿಕೆಯನ್ನು ಈಡೇರಿಸಿದೆ. ವಂದೇ ಭಾರತ್ ರೈಲುಗಳ ನಿರ್ವಹಣೆಗಾಗಿ ಥಣಿಸಂದ್ರದಲ್ಲಿ ಅಂದಾಜು ರೂ. 270 ಕೋಟಿ ವೆಚ್ಚದಲ್ಲಿ ನಿರ್ವಹಣಾ ಡಿಪೋ ನಿರ್ಮಿಸಲಾಗುತ್ತಿದೆ. ರಾಜ್ಯದಲ್ಲಿ ಹಲವು ಹೊಸ ರೈಲು ಮಾರ್ಗ ಮತ್ತು ಜೋಡಿ ಮಾರ್ಗ ಯೋಜನೆಗಳು ಪ್ರಗತಿಯಲ್ಲಿವೆ ಎಂದು ಹೇಳಿದರು.

ಬೆಂಗಳೂರಿನ ಎಸ್‌ಎಂವಿಟಿ ರೈಲು ನಿಲ್ದಾಣದಲ್ಲಿ ಆಯೋಜಿಸಲಾಗಿದ್ದ ಕಾರ್ಯಕ್ರಮದಲ್ಲಿ ಕೇಂದ್ರ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮ ಹಾಗೂ ಕಾರ್ಮಿಕ ಮತ್ತು ಉದ್ಯೋಗ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ, ಬೆಂಗಳೂರು ಕೇಂದ್ರ ಲೋಕಸಭಾ ಸದಸ್ಯ ಪಿ.ಸಿ. ಮೋಹನ್, ರಾಜ್ಯಸಭಾ ಸದಸ್ಯರಾದ ಲಹರ್ ಸಿಂಗ್ ಸಿರೋಯಾ ಮತ್ತು ಜಗ್ಗೇಶ್, ಶಾಸಕರಾದ ಎಸ್. ರಘು, ಮುನಿರತ್ನ, ರೈಲ್ವೆ ಮಂಡಳಿ ಅಧ್ಯಕ್ಷ ಹಾಗೂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸತೀಶ್ ಕುಮಾರ್, ಬೆಂಗಳೂರು ವಿಭಾಗದ ವಿಭಾಗೀಯ ರೈಲ್ವೆ ವ್ಯವಸ್ಥಾಪಕ ಆಶುತೋಷ್ ಕುಮಾರ್ ಸಿಂಗ್ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

ಪ್ರೊ. ಪಿ.ವಿ. ಕೊಣ್ಣೂರ ಅವರಿಗೆ ಅಭಿನಂದನಾ ಸಮಾರಂಭ

“ಮನುಷ್ಯ ತನ್ನ ಜೀವನದಲ್ಲಿ ಏನಾದರೂ ದೊಡ್ಡ ಸಾಧನೆ ಮಾಡಬೇಕು. ಅದಕ್ಕೆ ಪ್ರೊ. ಕೊಣ್ಣೂರು ಅವರೇ ಜೀವಂತ ಉದಾಹರಣೆ”: ಹೊರಟ್ಟಿ

● ವಿಕ್ರಮ ವಾಹಿನಿ । ಬೆಂಗಳೂರು

ಮನುಷ್ಯ ತನ್ನ ಜೀವನದಲ್ಲಿ ಏನಾದರೂ ದೊಡ್ಡ ಸಾಧನೆ ಮಾಡಬೇಕು. ಸಮಾಜಕ್ಕೆ ತನ್ನದೇ ಆದ ಕೊಡುಗೆ ನೀಡುವ ಮೂಲಕ ಜೀವನವನ್ನು ಸಾರ್ಥಕಗೊಳಿಸಿಕೊಳ್ಳಬೇಕು. ಈ ನಿಟ್ಟಿನಲ್ಲಿ ಪ್ರೊ. ಪಿ.ವಿ. ಕೊಣ್ಣೂರು ಅವರು ಎಲ್ಲರಿಗೂ ಜೀವಂತ ಉದಾಹರಣೆಯಾಗಿದ್ದಾರೆ ಎಂದು ವಿಧಾನ ಪರಿಷತ್ ಮಾಜಿ ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು.

ಬೆಂಗಳೂರಿನ ಸೆಂಟ್ರಲ್ ಕಾಲೇಜು ಆವರಣದ ಜ್ಞಾನಜ್ಯೋತಿ ಸಭಾಂಗಣದಲ್ಲಿ ಪ್ರೊ. ಪಿ.ವಿ. ಕೊಣ್ಣೂರು ಸನ್ಮಾನ ಸಮಿತಿ ವತಿಯಿಂದ ಆಯೋಜಿಸಲಾಗಿದ್ದ ಪ್ರೊ. ಪಿ.ವಿ. ಕೊಣ್ಣೂರು ಅವರ ಅಭಿನಂದನಾ ಸಮಾರಂಭದಲ್ಲಿ ಅವರು ಮಾತನಾಡಿದರು.

ಶಿಕ್ಷಣ ಕ್ಷೇತ್ರದಲ್ಲಿ ಅಪಾರ ಸೇವೆ ಸಲ್ಲಿಸಿರುವ ಹಾಗೂ ತಮ್ಮ ವೃತ್ತಿ ಜೀವನದ ಮೂಲಕ ಅನೇಕ ವಿದ್ಯಾರ್ಥಿಗಳ ಬದುಕಿಗೆ ದಾರಿದೀಪವಾಗಿರುವ ಪ್ರೊ. ಕೊಣ್ಣೂರು ಅವರ ಸಾಧನೆ ಮತ್ತು ಸಮಾಜಮುಖಿ ಕಾರ್ಯಗಳನ್ನು ಗಣ್ಯರು ಪ್ರಶಂಸಿಸಿದರು.



ಕಾರ್ಯಕ್ರಮದಲ್ಲಿ ಮಾಜಿ ಸಚಿವ ಹಾಗೂ ವಿಧಾನ ಪರಿಷತ್ ಸದಸ್ಯ ಬಿ.ಎಸ್. ಹೊರಟ್ಟಿ ಸೇರಿದಂತೆ ಶಿಕ್ಷಣ, ಸಾಹಿತ್ಯ ಮತ್ತು ಸಾಮಾಜಿಕ ಕ್ಷೇತ್ರಗಳ ಗಣ್ಯರು ಉಪಸ್ಥಿತರಿದ್ದು, ಪ್ರೊ. ಕೊಣ್ಣೂರು ಅವರನ್ನು ಅಭಿನಂದಿಸಿದರು. ಸಾಧನೆ, ಸೇವೆ ಮತ್ತು ಸರಳ ವ್ಯಕ್ತಿತ್ವದ ಮೂಲಕ ಸಮಾಜದಲ್ಲಿ ವಿಶಿಷ್ಟ ಸ್ಥಾನ ಗಳಿಸಿರುವ ಪ್ರೊ. ಪಿ.ವಿ. ಕೊಣ್ಣೂರು ಅವರಿಗೆ ಈ ಅಭಿನಂದನಾ ಸಮಾರಂಭ ಗೌರವದ ಕಿರೀಟವಾಯಿತು.



ರಾಜ್ಯಕ್ಕೆ ಇಂದು ಭೇಟಿ ನೀಡಿದ ಪ್ರಧಾನಮಂತ್ರಿ ನರೇಂದ್ರ ಮೋದಿಯವರನ್ನು ಬೆಂಗಳೂರಿನಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ಸ್ವಾಗತಿಸಿದರು. ಈ ಸಂದರ್ಭದಲ್ಲಿ ರಾಜ್ಯಪಾಲರಾದ ಶ್ರೀಮತಿ ಡಾ.ಸುಧಾ ಯಾದವ್, ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ, ಕೇಂದ್ರ ಸಚಿವರಾದ ವಿ.ಸೋಮಣ್ಣ, ಕು.ಶೋಭಾ ಕರಂದ್ಲಾಜೆ, ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ್, ವಿಧಾನ ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಪ್ರಮುಖರು ಉಪಸ್ಥಿತರಿದ್ದರು.

ಜಿಬಿಎ-ಪಾಲಿಕೆ ಅಧಿಕಾರಿ-ನೌಕರರು ಬೇಡಿಕೆ ಈಡೇರಿಕೆಗಾಗಿ

16ರಂದು ಸಾಮೂಹಿಕ ರಜೆ, ಬೃಹತ್ ಸಭೆ

● ವಿಕ್ರಮ ವಾಹಿನಿ । ಬೆಂಗಳೂರು

ಗ್ರೇಟರ್ ಬೆಂಗಳೂರು ಪ್ರಾಧಿಕಾರದ (ಜಿಬಿಎ) ಐದು ನಗರ ಪಾಲಿಕೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ ಮತ್ತು ನೌಕರರು ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಇದೆ 16ರಿಂದ ಸಾಮೂಹಿಕ ರಜೆ ಹಾಕುವ ಹೋರಾಟಕ್ಕೆ ರೆಡಿಯಾಗಿದ್ದಾರೆ.

ಜಿಬಿಎ ವ್ಯಾಪ್ತಿಯ ಅಧಿಕಾರಿ ಮತ್ತು ನೌಕರರಿಗೆ ಮುಂ ಬಡ್ತಿ, ಖಾಲಿ ಹುದ್ದೆಗಳ ಭರ್ತಿ, ನೇಮಕಾತಿ ಮತ್ತು ಶಿಸ್ತು ಪ್ರಾಧಿಕಾರದ ಅಧಿಕಾರ ಹಂಚಿಕೆ ಸೇರಿದಂತೆ ಹಲವು ಪ್ರಮುಖ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಈ ಹೋರಾಟದ ರೂಪುರೇಷೆ ಸಿದ್ಧಪಡಿಸಲಾಗುತ್ತಿದೆ ಎಂದು ಜಿಬಿಎ ನೌಕರರ ಸಂಘದ ಅಧ್ಯಕ್ಷ ಅಮೃತ್ ರಾಜ್ ತಿಳಿಸಿದ್ದಾರೆ.



ಜಿಬಿಎ ಆಯುಕ್ತರ ಆಡಳಿತ ಶಾಖೆಗೆ ಪ್ರತ್ಯೇಕ ವೃಂದ ಮತ್ತು ನೇಮಕಾತಿ ನಿಯಮಾವಳಿ (ಸಿ ಅಂಡ್ ಆರ್) ರೂಪಿಸಬೇಕು.

ಇದರಿಂದ ಅಧಿಕಾರಿಗಳು ಮತ್ತು ನೌಕರರಿಗೆ ಮುಂಬಡ್ತಿ ಸೇರಿದಂತೆ ವಿವಿಧ ಆಡಳಿತಾತ್ಮಕ ಸೌಲಭ್ಯಗಳನ್ನು ತ್ವರಿತವಾಗಿ ಒದಗಿಸಲು ಹಾಗೂ ಅಗತ್ಯ ಸಿಬ್ಬಂದಿಯನ್ನು ನೇಮಿಸಿಕೊಳ್ಳಲು ಅನುಕೂಲವಾಗಲಿದೆ ಎಂಬುದು ನಮ್ಮ ಪ್ರಮುಖ ಬೇಡಿಕೆಯಾಗಿದೆ. ಹೀಗಾಗಿ ನಮ್ಮ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಸಾಮೂಹಿಕ ರಜೆ ಹಾಕಿ ಹೋರಾಟ ನಡೆಸುವ ಕುರಿತಂತೆ ಚರ್ಚಿಸಲು ನ.16ರಂದು ಬೆಳಗ್ಗೆ 10ಗಂಟೆಯಿಂದ ಸಂಜೆ 5 ಗಂಟೆವರೆಗೆ ಟೌನ್‌ಹಾಲ್‌ನಲ್ಲಿ ಸಂಘದ ಸಭೆ ಕರೆಯಲಾಗಿದ್ದು, ಸಭೆಗೆ ಎಲ್ಲರೂ ತಪ್ಪದೆ ಹಾಜರಾಗಿ ತಮ್ಮ ಸಲಹೆ ಸೂಚನೆ ನೀಡಬೇಕು ಎಂದು ಅವರು ಮನವಿ ಮಾಡಿಕೊಂಡಿದ್ದಾರೆ.

4 ಸಾವಿರಕ್ಕೂ ಹೆಚ್ಚು ಹುದ್ದೆಗಳು ಖಾಲಿ:ಜಿಬಿಎ ವ್ಯಾಪ್ತಿಯಲ್ಲಿ ವಿವಿಧ ವೃಂದಗಳ 4,000ಕ್ಕೂ ಹೆಚ್ಚು ಹುದ್ದೆಗಳು ಖಾಲಿ ಇದ್ದು ಇದರಿಂದ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗೆ ಕೆಲಸದ ಒತ್ತಡ ಹೆಚ್ಚಾಗಿದೆ. ಹೀಗಾಗಿ ಖಾಲಿ ಹುದ್ದೆಗಳನ್ನು ತುರ್ತಾಗಿ ಭರ್ತಿ ಮಾಡಬೇಕು ಎಂದು ನೌಕರರು ಆಗ್ರಹಿಸಿದ್ದಾರೆ.

ಸಹಾಯಕ ಕಾರ್ಯಪಾಲಕ ಅಭಿಯಂತರ ರಿಂದ ಮುಖ್ಯ ಅಭಿಯಂತರರವರೆಗಿನ ಹುದ್ದೆ ಗಳಲ್ಲಿ ಡೆಪ್ಯುಟೇಷನ್ ಆಧಾರದ ಮೇಲೆ ನೇಮಕ ಗೊಂಡಿರುವವರ ವ್ಯವಸ್ಥೆಯನ್ನು ರದ್ದುಗೊಳಿಸಿ, ಅರ್ಹರಿಗೆ ನಿಯಮಾನುಸಾರ ಮುಂಬಡ್ತಿ ನೀಡಲು ವೃಂದ ಮತ್ತು ನೇಮಕಾತಿ ನಿಯಮಾವಳಿಯಲ್ಲಿ ಅವಕಾಶ ಕಲ್ಪಿಸಬೇಕು, ಜಿಬಿಎ ಹಾಗೂ ಐದು ನಗರ ಪಾಲಿಕೆಗಳ ಕಾನೂನು ಕೋಶಗಳಿಗೆ ತಲಾ ಒಬ್ಬ ಕಾನೂನು ಅಧಿಕಾರಿ ಹುದ್ದೆ ಸೃಷ್ಟಿಸಬೇಕು. ಜಿಬಿಎ ಕಾನೂನು ಕೋಶಕ್ಕೆ ಹೆಚ್ಚುವರಿಯಾಗಿ ಇಬ್ಬರು ಉಪ ಕಾನೂನು ಅಧಿಕಾರಿಗಳನ್ನು ಹಾಗೂ ಪ್ರತಿ ಕಾನೂನು ಕೋಶಕ್ಕೆ ತಲಾ ಮೂವರು ಕಿರಿಯ ಕಾನೂನು ಅಧಿಕಾರಿಗಳನ್ನು ನೇಮಿಸಲು ಹುದ್ದೆಗಳನ್ನು ಸೃಷ್ಟಿಸಬೇಕು ಎಂದು ಸಂಘ ಕೋರಿದೆ. ಎ ಶ್ರೇಣಿಯ ಉಪ ಆಯುಕ್ತರು, ಕಂದಾಯ ಅಧಿಕಾರಿಗಳು ಮತ್ತು ಉಪ ಕಂದಾಯ ಅಧಿಕಾರಿಗಳ ಹುದ್ದೆಗಳು ಖಾಲಿ ಇರುವ ಹಿನ್ನೆಲೆಯಲ್ಲಿ, ಕಂದಾಯ ಇಲಾಖೆಯ ಕಾರ್ಯನಿರ್ವಹಣೆ ಹಾಗೂ ಮುಂಬರುವ ಜಿಬಿಎ ಚುನಾವಣೆಗಳ ಸಿದ್ಧತೆಯ ದೃಷ್ಟಿಯಿಂದ ಅರ್ಹರಿಗೆ ಮುಂಬಡ್ತಿ ನೀಡಬೇಕು ಎಂದು ಸಂಘ ಆಗ್ರಹಿಸಿದೆ.

ಈ ಎಲ್ಲ ಬೇಡಿಕೆಗಳ ಕುರಿತು ಸರ್ಕಾರ ಹಾಗೂ ಜಿಬಿಎ ಆಡಳಿತ ತುರ್ತು ಕ್ರಮ ಕೈಗೊಳ್ಳದಿದ್ದರೆ ನವೆಂಬರ್ 16ರಿಂದ ಸಾಮೂಹಿಕ ರಜೆ ಮೂಲಕ ಹೋರಾಟ ನಡೆಸುವ ಬಗ್ಗೆ ತೀರ್ಮಾನಿಸಲಾಗುವುದು ಎಂದು ಅವರು ಎಚ್ಚರಿಸಿದ್ದಾರೆ

ಯುಪಿಐ ಪಾವತಿದಾರರು, ವ್ಯಾಪಾರಿಗಳಿಗೆ ಬಿಗ್ ರಿಲೀಫ್

● ವಿಕ್ರಮ ವಾಹಿನಿ । ನವದೆಹಲಿ

ಯುಪಿಐ ಮೂಲಕ ಹಣ ಪಾವತಿ ಮಾಡುವ ಗ್ರಾಹಕರು ಹಾಗೂ ವ್ಯಾಪಾರಿಗಳಿಗೆ ದೊಡ್ಡ ರಿಲೀಫ್ ಸಿಕ್ಕಿದೆ. ಯುಪಿಐ ವಹಿವಾಟುಗಳ ಮೇಲೆ ಮರ್ಚೆಂಟ್ ಡಿಸ್ಕೌಂಟ್ ರೇಟ್ (ಎಂಡಿಆರ್) ಶುಲ್ಕ ವಿಧಿಸುವ ಯಾವುದೇ ಯೋಜನೆ ಸದ್ಯಕ್ಕಿಲ್ಲ ಎಂದು ನ್ಯಾಷನಲ್ ಪೇಮೆಂಟ್ಸ್ ಕಾರ್ಪೊರೇಷನ್ ಆಫ್ ಇಂಡಿಯಾ (ಎನ್‌ಪಿಸಿಐ) ಸ್ಪಷ್ಟಪಡಿಸಿದೆ.

ಯತ್ನಾಳ್‌ಗೆ ಹೈಕೋರ್ಟ್‌ನಲ್ಲಿ ಹಿನ್ನಡೆ

● ವಿಕ್ರಮ ವಾಹಿನಿ । ಬೆಂಗಳೂರು

ಮಾಜಿ ಸಚಿವ ಹಾಗೂ ಶಾಸಕ ಶಿವಾನಂದ ಎಸ್. ಪಾಟೀಲ್ ವಿರುದ್ಧ ಅವಹೇಳನಕಾರಿ ಹೇಳಿಕೆ ನೀಡಿದ ಆರೋಪಕ್ಕೆ ಸಂಬಂಧಿಸಿದ ಮಾನಹಾನಿ ಪ್ರಕರಣದಲ್ಲಿ ವಿಜಯಪುರ ನಗರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರಿಗೆ ಹೈಕೋರ್ಟ್‌ನಲ್ಲಿ ಹಿನ್ನಡೆಯಾಗಿದೆ. ತಮ್ಮ ವಿರುದ್ಧದ ಮಾನಹಾನಿ ಮೊಕದ್ದಮೆಯ ವಿಚಾರಣಾ ಪ್ರಕ್ರಿಯೆಯನ್ನು ರದ್ದುಪಡಿಸುವಂತೆ ಕೋರಿ ಯತ್ನಾಳ್ ಸಲ್ಲಿಸಿದ್ದ ಅರ್ಜಿಯನ್ನು ನ್ಯಾಯಮೂರ್ತಿ ಅನಂತ್ ರಾಮನಾಥ್ ಹೆಗಡೆ ಅವರಿದ್ದ ಏಕಸದಸ್ಯ ಪೀಠ ವಜಾಗೊಳಿಸಿ ಆದೇಶಿಸಿದೆ.

ಮಾನಹಾನಿ ಪ್ರಕರಣದಲ್ಲಿ ಮ್ಯಾಜಿಸ್ಟ್ರೇಟ್ ನ್ಯಾಯಾಲಯವು ವಿಚಾರಣೆಗೆ ಸಂಜ್ಞೆ ತೆಗೆದುಕೊಳ್ಳುವ ಹಂತದಲ್ಲಿ, ದೂರುದಾರರ ಗೌರವಕ್ಕೆ ಧಕ್ಕೆಯಾಗಿದೆ ಎಂದು ಸಾಬೀತುಪಡಿಸಲು ಮೂರನೇ ವ್ಯಕ್ತಿಯೊಬ್ಬರು ನ್ಯಾಯಾಲಯದ ಮುಂದೆ ಸಾಕ್ಷ್ಯ ನುಡಿಯಲೇಬೇಕು ಎಂಬ ಕಡ್ಡಾಯ ನಿಯಮವಿಲ್ಲ ಎಂದು ಹೈಕೋರ್ಟ್ ಸ್ಪಷ್ಟಪಡಿಸಿದೆ. ಆರೋಪಿಯ ಹೇಳಿಕೆಗಳು ಮೇಲ್ನೋಟಕ್ಕೆ ದೂರುದಾರರ ನೈತಿಕತೆ, ಚಾರಿತ್ರ್ಯ ಮತ್ತು ಗೌರವಕ್ಕೆ ಧಕ್ಕೆ ತರುವಂತಿದ್ದರೆ, ದೂರುದಾರರು ಹಾಗೂ ಇತರ ಸಾಕ್ಷಿಗಳ ಹೇಳಿಕೆಗಳನ್ನು ಆಧರಿಸಿ ಮ್ಯಾಜಿಸ್ಟ್ರೇಟ್ ನ್ಯಾಯಾಲಯ ವಿಚಾರಣೆಗೆ ಮುಂದಾಗಬಹುದು ಎಂದು ಪೀಠ ಅಭಿಪ್ರಾಯಪಟ್ಟಿದೆ.

ಯತ್ನಾಳ್ ಅವರ ಹೇಳಿಕೆಗಳು ಮೇಲ್ನೋಟಕ್ಕೆ ದೂರುದಾರ ಶಿವಾನಂದ ಪಾಟೀಲ್ ಅವರ ಚಾರಿತ್ರ್ಯ ಮತ್ತು ಘನತೆಗೆ ಧಕ್ಕೆ ತರುವಂತಿವೆ ಎಂದು ನ್ಯಾಯಪೀಠ ಹೇಳಿದೆ. ಅಲ್ಲದೆ, ವಿಚಾರಣಾ ನ್ಯಾಯಾಲಯವು ಇಬ್ಬರು ಸಾಕ್ಷಿಗಳ ಹೇಳಿಕೆಗಳನ್ನು ಆಧರಿಸಿ ಪ್ರಕರಣದಲ್ಲಿ ಸಂಜ್ಞೆ ತೆಗೆದುಕೊಂಡಿರುವ ಕ್ರಮವನ್ನು ದೋಷಪೂರಿತ ಎಂದು ಹೇಳಲಾಗದು ಎಂದು ತಿಳಿಸಿದೆ. ಯತ್ನಾಳ್ ಅವರ ಹೇಳಿಕೆಗಳಿಂದ ಸಾರ್ವಜನಿಕರ ದೃಷ್ಟಿಯಲ್ಲಿ ಶಿವಾನಂದ ಪಾಟೀಲ್ ಅವರ ಗೌರವ ನಿಜವಾಗಿಯೂ ಕುಂದಿದೆಯೇ ಅಥವಾ ಇಲ್ಲವೇ ಎಂಬುದನ್ನು ವಿಚಾರಣಾ ನ್ಯಾಯಾಲಯದಲ್ಲಿ ಸಾಕ್ಷ್ಯಾಧಾರಗಳ ಆಧಾರದ ಮೇಲೆ ನಿರ್ಧರಿಸಬೇಕಾಗುತ್ತದೆ ಎಂದು ಪೀಠ ಸ್ಪಷ್ಟಪಡಿಸಿದೆ.

2025ರ ಏಪ್ರಿಲ್ 30ರಂದು ಖಾಸಗಿ ಯೂಟ್ಯೂಬ್ ವಾಹಿನಿಯೊಂದಕ್ಕೆ ನೀಡಿದ್ದ ಸಂದರ್ಶನದಲ್ಲಿ ಯತ್ನಾಳ್ ಅವರು ತಮ್ಮ ವಿರುದ್ಧ ತೀವ್ರ ಅವಹೇಳನಕಾರಿ ಹಾಗೂ ಮಾನಹಾನಿಕರ ಹೇಳಿಕೆಗಳನ್ನು ನೀಡಿದ್ದಾರೆ ಎಂದು ಆರೋಪಿಸಿ ಶಿವಾನಂದ ಪಾಟೀಲ್ ದೂರು ದಾಖಲಿಸಿದ್ದರು. ಯತ್ನಾಳ್ ಅವರ ಹೇಳಿಕೆಗಳು ಮೇಲ್ನೋಟಕ್ಕೆ ದೂರುದಾರ ಶಿವಾನಂದ ಪಾಟೀಲ್ ಅವರ ಚಾರಿತ್ರ್ಯ ಮತ್ತು ಘನತೆಗೆ ಧಕ್ಕೆ ತರುವಂತಿವೆ ಎಂದು ನ್ಯಾಯಪೀಠ ಹೇಳಿದೆ.

ಅಲ್ಲದೆ, ವಿಚಾರಣಾ ನ್ಯಾಯಾಲಯವು ಇಬ್ಬರು ಸಾಕ್ಷಿಗಳ ಹೇಳಿಕೆಗಳನ್ನು ಆಧರಿಸಿ ಪ್ರಕರಣದಲ್ಲಿ ಸಂಜ್ಞೆ ತೆಗೆದುಕೊಂಡಿರುವ ಕ್ರಮವನ್ನು ದೋಷಪೂರಿತ ಎಂದು ಹೇಳಲಾಗದು ಎಂದು ತಿಳಿಸಿದೆ.

ಈ ಸಂಬಂಧ 2025ರ ಜುಲೈ 18ರಂದು ಬೆಂಗಳೂರಿನ 42ನೇ ಹೆಚ್ಚುವರಿ ಮ್ಯಾಜಿಸ್ಟ್ರೇಟ್ ನ್ಯಾಯಾಲಯದಲ್ಲಿ ಖಾಸಗಿ ದೂರು ಸಲ್ಲಿಸಿದ್ದರು. ಪ್ರಕರಣದ ವಿಚಾರಣಾ ಪ್ರಕ್ರಿಯೆಯನ್ನು ರದ್ದುಪಡಿಸುವಂತೆ ಯತ್ನಾಳ್ ಹೈಕೋರ್ಟ್ ಮೊರೆ ಹೋಗಿದ್ದರು. ಇದೀಗ ಹೈಕೋರ್ಟ್ ಅರ್ಜಿಯನ್ನು ವಜಾ ಗೊಳಿಸಿರುವುದರಿಂದ ಪ್ರಕರಣದ ವಿಚಾರಣೆ ಮುಂದುವರಿಯಲಿದೆ.

ಓಲಾಗೆ ಬಿತ್ತು ಭಾರೀ ದಂಡ!

● ವಿಕ್ರಮ ವಾಹಿನಿ । ನವದೆಹಲಿ

ಪ್ರಯಾಣಕ್ಕೂ ಮುನ್ನವೇ ಹಣ ಪಾವತಿಸುವಂತೆ ಗ್ರಾಹಕರನ್ನು ದಾರಿ ತಪ್ಪಿಸಿ, ಹೆಚ್ಚುವರಿ ಹಣ ಪಾವತಿಸಲು ಒತ್ತಡ ಹೇರುತ್ತಿದ್ದ ಆರೋಪದ ಹಿನ್ನೆಲೆಯಲ್ಲಿ ಕೇಂದ್ರ ಗ್ರಾಹಕ ರಕ್ಷಣಾ ಪ್ರಾಧಿಕಾರ (ಸಿಸಿಪಿಎ) ಓಲಾ ಸಂಸ್ಥೆಗೆ ರೂ.10 ಲಕ್ಷ ದಂಡ ವಿಧಿಸಿದೆ.

ಕೇಂದ್ರ ಗ್ರಾಹಕ ವ್ಯವಹಾರಗಳ ಸಚಿವ ಪ್ರಹ್ಲಾದ್ ಜೋಶಿ ಅವರ ಸೂಚನೆಯಂತೆ ಗ್ರಾಹಕರ ಹಿತರಕ್ಷಣೆಗೆ ಬದ್ಧವಾಗಿರುವ ಸಿಸಿಪಿಎ, ಗ್ರಾಹಕರನ್ನು ವಂಚಿಸುವ ಸಂಸ್ಥೆಗಳ ವಿರುದ್ಧ ಕಟ್ಟುನಿಟ್ಟಿನ ಕ್ರಮ ಮುಂದುವರಿಸಿದೆ. ಇದೀಗ ಓಲಾ ಸಂಸ್ಥೆಯ ವಿರುದ್ಧ ಕ್ರಮ ಕೈಗೊಂಡಿರುವ ಪ್ರಾಧಿಕಾರ, ಡಿಜಿಟಲ್ ಸೇವೆಗಳಲ್ಲಿ ಪಾರದರ್ಶಕತೆ ಕಾಪಾಡುವಂತೆ ಸೂಚಿಸಿದೆ. ಓಲಾ ಸಂಸ್ಥೆಯು ಪ್ರಯಾಣಕ್ಕೂ ಮುನ್ನವೇ ಹಣ ಪಾವತಿಸಿದರೆ ವೇಗವಾಗಿ ಪ್ರಯಾಣ ಸೇವೆ ಖಚಿತವಾಗುತ್ತದೆ ಎಂಬ ಸಂದೇಶದ ಮೂಲಕ ಗ್ರಾಹಕರನ್ನು ತಪ್ಪು ದಾರಿಗೆಳೆಯುತ್ತಿತ್ತು. ಮೊದಲೇ ನಿಗದಿಪಡಿಸಿದ ಪ್ರಯಾಣ ದರಕ್ಕಿಂತ ಹೆಚ್ಚಿನ ಹಣ ಪಾವತಿಸುವಂತೆ ವಿವಿಧ ಮಾರ್ಗಗಳ ಮೂಲಕ ಗ್ರಾಹಕರ ಮೇಲೆ ಒತ್ತಡ ಹೇರಲಾಗುತ್ತಿತ್ತು ಎಂದು ತನಿಖೆಯಲ್ಲಿ ತಿಳಿದುಬಂದಿದೆ.

ಗ್ರಾಹಕರ ನಿರ್ಧಾರಗಳ ಮೇಲೆ ಪ್ರಭಾವ ಬೀರಿ ಹೆಚ್ಚುವರಿ ಹಣ ವಸೂಲಿ ಮಾಡಲು ಅನ್ಯಾಯದ ಡಿಜಿಟಲ್ ತಂತ್ರಗಳನ್ನು ಬಳಸಿರುವುದು ಸಿಸಿಪಿಎ ತನಿಖೆಯಲ್ಲಿ ಸಾಬೀತಾಗಿದೆ.

ಇಂತಹ ಪದ್ಧತಿಗಳನ್ನು ಡಾರ್ಕ್ ಪ್ಯಾಟರ್ನ್ಸ್ ಎಂದು ಕರೆಯಲಾಗುತ್ತದೆ. ಗ್ರಾಹಕರಿಗೆ ಸ್ಪಷ್ಟ ಆಯ್ಕೆ ನೀಡದೆ, ಅವರ ನಿರ್ಧಾರವನ್ನು ಪ್ರಭಾವಿಸುವ ಮೂಲಕ ಹೆಚ್ಚುವರಿ ಹಣ ಪಾವತಿಸುವಂತೆ ಮಾಡುವ ಕ್ರಮಗಳನ್ನು ಪ್ರಾಧಿಕಾರ ಗಂಭೀರವಾಗಿ ಪರಿಗಣಿಸಿದೆ. ಕೇವಲ ದಂಡ ವಿಧಿಸುವುದಷ್ಟೇ ಅಲ್ಲದೆ, ಮೊದಲೇ ನಿಗದಿಪಡಿಸಿದ ಪ್ರಯಾಣ ದರಕ್ಕಿಂತ ಹೆಚ್ಚಿನ ಹಣ ಪಾವತಿಸುವಂತೆ ಯಾವುದೇ ಅನ್ಯಾಯದ ಮಾರ್ಗವನ್ನು ಬಳಸಿಕೊಂಡು ಗ್ರಾಹಕರನ್ನು ಒತ್ತಾಯಿಸಬಾರದು ಎಂದು ಸಿಸಿಪಿಎ ಓಲಾ ಸಂಸ್ಥೆಗೆ ಕಟ್ಟುನಿಟ್ಟಿನ ಎಚ್ಚರಿಕೆ ನೀಡಿದೆ. ಈ ಕುರಿತು ಪ್ರತಿಕ್ರಿಯಿಸಿರುವ ಸಚಿವ ಪ್ರಹ್ಲಾದ್ ಜೋಶಿ, ಡಾರ್ಕ್ ಪ್ಯಾಟರ್ನ್ಸ್, ಅನಗತ್ಯ ಹಾಗೂ ಅನ್ಯಾಯದ ವ್ಯವಹಾರ ಪದ್ಧತಿಗಳು ಮತ್ತು ಗ್ರಾಹಕರನ್ನು ದಾರಿ ತಪ್ಪಿಸುವ ಕ್ರಮಗಳ ವಿರುದ್ಧ ಕೈಗೊಂಡಿರುವ ಈ ಕಠಿಣ ಕ್ರಮವು ಗ್ರಾಹಕರ ಹಕ್ಕುಗಳನ್ನು ರಕ್ಷಿಸುವ ಸರ್ಕಾರದ ಬದ್ಧತೆಯನ್ನು ಪುನರುಚ್ಚರಿಸುತ್ತದೆ ಎಂದು ತಿಳಿಸಿದ್ದಾರೆ.

ಕೆ.ಜಿಗೆ ರೂ.110 ದಾಟಿದ ಜೋಳದ ಬೆಲೆ!

● ವಿಕ್ರಮ ವಾಹಿನಿ । ಬೆಂಗಳೂರು

ಉತ್ತರ ಕರ್ನಾಟಕದ ಜನರ ನಿತ್ಯದ ಪ್ರಧಾನ ಆಹಾರವಾಗಿರುವ ಜೋಳದ ಬೆಲೆ ಇದೀಗ ಗಗನಕ್ಕೇರಿದೆ. ಇತಿಹಾಸದಲ್ಲೇ ಮೊದಲ ಬಾರಿಗೆ ಚಿಲ್ಲರೆ ಮಾರುಕಟ್ಟೆಯಲ್ಲಿ ಪ್ರತಿ ಕೆ.ಜಿ. ಜೋಳದ ದರ ರೂ.100ರ ಗಡಿ ದಾಟಿ ರೂ.110ರ ಆಸುಪಾಸಿಗೆ ತಲುಪಿದೆ. ಅಕ್ಕಿಯ ಬೆಲೆ ಏರಿಕೆಯ ಬೆನ್ನಲ್ಲೇ ಜೋಳದ ದರವೂ ಭಾರಿ ಪ್ರಮಾಣದಲ್ಲಿ ಹೆಚ್ಚಳವಾಗಿರುವುದು ಜನಸಾಮಾನ್ಯರಿಗೆ ಮತ್ತೊಂದು ಹೊರೆ ತಂದಿದೆ. ಜೋಳದ ಬೆಲೆ ಏರಿಕೆ ರೈತರಿಗೆ ಸಂತಸ ತಂದಿದ್ದರೆ, ಗ್ರಾಹಕರಿಗೆ ಕಣ್ಣೀರು ತರಿಸುತ್ತಿದೆ.

ಸತತ ಬರಗಾಲದ ಪರಿಣಾಮವಾಗಿ ಜೋಳದ ಇಳುವರಿ ತೀವ್ರವಾಗಿ ಕುಸಿದಿದ್ದು, ಮಾರುಕಟ್ಟೆಯಲ್ಲಿ ಪೂರೈಕೆ ಕಡಿಮೆಯಾಗಿದೆ. ಇದರ ಪರಿಣಾಮವಾಗಿ ಕಳೆದ ಕೇವಲ 15 ದಿನಗಳ ಅವಧಿಯಲ್ಲಿ ಉತ್ತರ ಕರ್ನಾಟಕದ ಪ್ರಮುಖ ಮಾರುಕಟ್ಟೆಗಳ ಪೈಕಿ ಬಾಗಲಕೋಟೆ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಕೆ.ಜಿ. ಜೋಳದ ಬೆಲೆ ರೂ.60ರಿಂದ ಏಕಾಏಕಿ ರೂ.110ಕ್ಕೆ ಏರಿಕೆಯಾಗಿದೆ. ಈ ದಿಢೀರ್ ಬೆಲೆ ಏರಿಕೆಯು ಬಡ ಮತ್ತು ಮಧ್ಯಮ ವರ್ಗದ ಕುಟುಂಬಗಳ ದೈನಂದಿನ ಕಿರಾಣಿ ವೆಚ್ಚವನ್ನು ಹೆಚ್ಚಿಸಿದೆ. ದಿನಗೂಲಿ ನೌಕರರು ಕೂಡ ಒಂದು ಕೆ.ಜಿ. ಜೋಳ ಖರೀದಿಸಲು ನೂರು ರೂಪಾಯಿಗೂ ಹೆಚ್ಚು ಹಣ ವ್ಯಯಿಸಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ.

ಸತ್ವದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ
ವಿಕ್ರಮ ವಾಹಿನಿ
ನವೆಂಬರ್, 14- 2026
ಶನಿವಾರ

www.VIKRAMAVAHINI.com
|| ಕನ್ನಡ ದಿನಪತ್ರಿಕೆ ||
PRGI NO: KARKAN/2018/78481

ಯುವಜನರ ವೈಜ್ಞಾನಿಕ ಕನಸುಗಳಿಗೆ COSMOS–Mysuru ಹೊಸ ವೇದಿಕೆ



● ವಿಕ್ರಮ ವಾಹಿನಿ । ಮೈಸೂರು

ವಿಜ್ಞಾನ ಮತ್ತು ಆಧ್ಯಾತ್ಮದ ಪರಂಪರೆ ಭಾರತದಲ್ಲಿ ಸದಾ ಜೊತೆಯಾಗಿ ಬೆಳೆದುಬಂದಿವೆ. ಆಧ್ಯಾತ್ಮವು ನಮ್ಮೊಳಗೆ ನೋಡುವಂತೆ, ಬ್ರಹ್ಮಾಂಡದ ಅಧ್ಯಯನವು ನಮ್ಮ ದೃಷ್ಟಿಯನ್ನು ಆಕಾಶದತ್ತ ಹರಿಸುವಂತೆ ಪ್ರೇರೇಪಿಸುತ್ತದೆ ಎಂದು ಸನ್ಮಾನ್ಯ ಪ್ರಧಾನ ಮಂತ್ರಿ ನರೇಂದ್ರ ಮೋದಿ ಹೇಳಿದರು.

ಮೈಸೂರಿನ ಚಾಮುಂಡಿಬೆಟ್ಟದ ತಪ್ಪಲಿನಲ್ಲಿರುವ ಜಯಚಾಮರಾಜ ಒಡೆಯರ್ ಸೆಂಟರ್ ಫಾರ್ ಹೈಯರ್ ಲರ್ನಿಂಗ್ ಆವರಣದಲ್ಲಿ ವಿಶ್ವದ ಮೊದಲ ಟಿಲ್ಟೆಡ್ ಎಲ್‌ಇಡಿ ಡೋಮ್ ತಾರಾಲಯವಾದ COSMOS–Mysuru ಅನ್ನು ರಾಷ್ಟ್ರಕ್ಕೆ ಸಮರ್ಪಿಸಿ ಮಾತನಾಡಿದ ಅವರು, ಮೈಸೂರಿಗೆ ಮತ್ತೊಮ್ಮೆ ಆಗಮಿಸಿರುವುದು ಸಂತಸ ತಂದಿದೆ. ಕೆಲವು ತಿಂಗಳ ಹಿಂದೆಯಷ್ಟೇ ವಿವೇಕಾನಂದರಿಗೆ ಸಂಬಂಧಿಸಿದ ಕಾರ್ಯಕ್ರಮದಲ್ಲಿ ಭಾಗವಹಿಸಲು ಬಂದಿದ್ದೆ. ಇಂದು COSMOS ತಾರಾಲಯವನ್ನು ರಾಷ್ಟ್ರಕ್ಕೆ ಸಮರ್ಪಿಸುವ ಅವಕಾಶ ದೊರೆತಿದೆ ಎಂದರು.

ಭಾರತದ ಪೂರ್ವಜರು ಆಕಾಶವನ್ನು ಅತ್ಯಂತ ಸೂಕ್ಷ್ಮವಾಗಿ ಅಧ್ಯಯನ ಮಾಡುತ್ತಿದ್ದರು. ನಕ್ಷತ್ರಗಳು ಮತ್ತು ಗ್ರಹಗಳ ಚಲನೆಯನ್ನು ಅರ್ಥಮಾಡಿಕೊಂಡು ಪಂಚಾಂಗಗಳನ್ನು ರೂಪಿಸಿದ್ದರು. ಸೂರ್ಯ ಮತ್ತು ಚಂದ್ರಗ್ರಹಣಗಳ ಸಮಯವನ್ನು ನಿಖರವಾಗಿ ಲೆಕ್ಕ ಹಾಕುತ್ತಿದ್ದರು. ಆರ್ಯಭಟ, ವರಾಹಮಿಹಿರ, ಭಾಸ್ಕರಾಚಾರ್ಯ ಸೇರಿದಂತೆ ಅನೇಕ ಮಹಾನ್ ಖಗೋಳ ವಿಜ್ಞಾನಿಗಳು ಭಾರತದಲ್ಲಿ ಜನಿಸಿದ್ದರು. ಇಂದಿನಂತಹ ಅತ್ಯಾಧುನಿಕ ಉಪಕರಣಗಳು ಮತ್ತು ತಂತ್ರಜ್ಞಾನಗಳು ಇಲ್ಲದ ಕಾಲದಲ್ಲಿಯೇ ಅವರು ಮಹತ್ವದ ಸಂಶೋಧನೆಗಳನ್ನು ನಡೆಸಿ, ಸಂಕೀರ್ಣ ಗಣಿತದ ಲೆಕ್ಕಾಚಾರಗಳನ್ನು ಮಾಡಿದ್ದರು ಎಂದು ಸ್ಮರಿಸಿದರು.

ಜ್ಞಾನ ಮತ್ತು ಸಂಶೋಧನೆಗೆ ಮೈಸೂರಿನ ಮಹಾರಾಜರ ಕೊಡುಗೆ ಅಪಾರ

ಜ್ಞಾನ ಮತ್ತು ಸಂಶೋಧನೆಗೆ ಪ್ರೋತ್ಸಾಹ ನೀಡುವ ಸಂಸ್ಥೆಗಳನ್ನು ನಿರ್ಮಿಸುವ ಪರಂಪರೆ ಮೈಸೂರಿನಲ್ಲಿದೆ. ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಕಾಲದಲ್ಲಿ ಮೈಸೂರು ವಿಶ್ವವಿದ್ಯಾಲಯ ಸ್ಥಾಪನೆಯಾಯಿತು. ಬೆಂಗಳೂರಿನಲ್ಲಿ ಭಾರತೀಯ ವಿಜ್ಞಾನ ಸಂಸ್ಥೆ ಸ್ಥಾಪನೆಯಲ್ಲಿಯೂ ಒಡೆಯರ್ ಕುಟುಂಬ ಮಹತ್ವದ ಪಾತ್ರ ವಹಿಸಿದೆ. ಈ ಸಂಸ್ಥೆಗಳು ಹಲವು ತಲೆಮಾರುಗಳ ವಿದ್ಯಾರ್ಥಿಗಳು ಮತ್ತು ಸಂಶೋಧಕರಿಗೆ ಅವಕಾಶಗಳನ್ನು ಕಲ್ಪಿಸಿವೆ.

ಇಂದು ಭಾರತ ವಿಜ್ಞಾನ ಕ್ಷೇತ್ರದಲ್ಲಿ ಒಂದರ ಹಿಂದೆ ಒಂದರಂತೆ ಹೊಸ ಸಾಧನೆಗಳನ್ನು ಮಾಡುತ್ತಿರುವ ಸಂದರ್ಭದಲ್ಲಿ ಅತ್ಯಾಧುನಿಕ COSMOS ತಾರಾಲಯದ ಮೂಲಕ ಮೈಸೂರು ಭಾರತದ ವೈಜ್ಞಾನಿಕ ಪಯಣಕ್ಕೆ ಹೊಸ ಅಧ್ಯಾಯವನ್ನು ಸೇರ್ಪಡೆಗೊಳಿಸಿದೆ ಎಂದರು.

ಭಾರತದ ಮೊದಲ ಎಲ್‌ಇಡಿ ಡೋಮ್ ತಾರಾಲಯವಾಗಿರುವ COSMOS ಯುವಜನರು ಮತ್ತು ದೇಶವಾಸಿಗಳಿಗೆ ಸಮರ್ಪಿತವಾಗುತ್ತಿದೆ. ತಾರಾಲಯದಲ್ಲಿ ಪ್ರದರ್ಶಿಸಲಾದ ಕಾರ್ಯಕ್ರಮವನ್ನು ವೀಕ್ಷಿಸುವ ಅವಕಾಶ ನನಗೂ ದೊರೆಯಿತು. ಇದು ಅತ್ಯಂತ ಅದ್ಭುತ ಅನುಭವವಾಗಿದೆ. ಭಾರತೀಯ ಖಗೋಳ ಭೌತಶಾಸ್ತ್ರ ಸಂಸ್ಥೆ, ಮೈಸೂರು ವಿಶ್ವವಿದ್ಯಾಲಯ, ವಿವಿಧ ಸರ್ಕಾರಿ ಇಲಾಖೆಗಳು ಹಾಗೂ ಯೋಜನೆಯ ನಿರ್ಮಾಣದಲ್ಲಿ ತೊಡಗಿಸಿಕೊಂಡ ಎಲ್ಲರನ್ನೂ ಅಭಿನಂದಿಸುತ್ತೇನೆ ಎಂದು ಹೇಳಿದರು.

ಜೈ ಜವಾನ್, ಜೈ ಕಿಸಾನ್, ಜೈ ವಿಜ್ಞಾನ್, ಜೈ ಅನುಸಂಧಾನ್: ದೇಶದಲ್ಲಿ ಬಹುಕಾಲದಿಂದ ಜೈ ಜವಾನ್, ಜೈ ಕಿಸಾನ್ ಎಂಬ ಘೋಷಣೆ ಚಾಲ್ತಿಯಲ್ಲಿದೆ. ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರು ಇದಕ್ಕೆ ಜೈ ವಿಜ್ಞಾನ್ ಸೇರಿಸಿದರು. ನಾನು ಜೈ ಅನುಸಂಧಾನ್ ಎಂಬ ಘೋಷಣೆಯನ್ನು ಸೇರ್ಪಡೆಗೊಳಿಸಿದೆ. 21ನೇ ಶತಮಾನದ ಭಾರತ ಇದೇ ದೂರದೃಷ್ಟಿಯೊಂದಿಗೆ ಮುನ್ನಡೆಯುತ್ತಿದೆ. ಈ ಪಯಣದಲ್ಲಿ ದೇಶದ ಯುವಜನರು ಉತ್ತಮ ಸಾಧನೆ ಮಾಡುತ್ತಿದ್ದಾರೆ ಎಂದರು.

ಕಳೆದ ವರ್ಷ ಭಾರತದಲ್ಲಿ ನಡೆದ ಅಂತರರಾಷ್ಟ್ರೀಯ ಖಗೋಳ ವಿಜ್ಞಾನ ಮತ್ತು ಖಗೋಳ ಭೌತಶಾಸ್ತ್ರ ಒಲಿಂಪಿಯಾಡ್‌ನಲ್ಲಿ ನಮ್ಮ ಯುವಜನರು ಉತ್ಸಾಹದಿಂದ ಭಾಗವಹಿಸಿದ್ದರು. ಈ ವರ್ಷದ ಮುಂದಿನ ಆವೃತ್ತಿಯಲ್ಲಿ ಭಾಗವಹಿಸಲು ವಿಯೆಟ್ನಾಂಗೆ ತೆರಳಿದ ಭಾರತದ ಐವರು ವಿದ್ಯಾರ್ಥಿಗಳ ಪೈಕಿ ನಾಲ್ವರು ಚಿನ್ನದ ಪದಕ ಹಾಗೂ ಒಬ್ಬರು ಬೆಳ್ಳಿ ಪದಕ ಗೆದ್ದಿರುವುದು ದೇಶಕ್ಕೆ ಹೆಮ್ಮೆಯ ಸಂಗತಿಯಾಗಿದೆ.

ಗಣಿತ, ಭೌತಶಾಸ್ತ್ರ, ರಸಾಯನಶಾಸ್ತ್ರ ಮತ್ತು ಜೀವಶಾಸ್ತ್ರ ಸೇರಿದಂತೆ ವಿವಿಧ ವಿಷಯಗಳ ಅಂತರರಾಷ್ಟ್ರೀಯ ಒಲಿಂಪಿಯಾಡ್‌ಗಳಲ್ಲಿಯೂ ಭಾರತೀಯ ವಿದ್ಯಾರ್ಥಿಗಳು ಚಿನ್ನ ಮತ್ತು ಬೆಳ್ಳಿ ಪದಕಗಳನ್ನು ಗೆದ್ದು ದಾಖಲೆ ಸಾಧನೆ ಮಾಡಿದ್ದಾರೆ. ಯುವಜನರಿಗೆ ಸೂಕ್ತ ಅವಕಾಶ, ಕಲಿಕೆಗೆ ಅಗತ್ಯವಾದ ಸಂಪನ್ಮೂಲ ಮತ್ತು ತಂತ್ರಜ್ಞಾನ ಒದಗಿಸಿದರೆ ಅವರು ದೊಡ್ಡ ಸಾಧನೆ ಮಾಡಬಲ್ಲರು. COSMOS ತಾರಾಲಯವು ಯುವಜನರ ಕನಸುಗಳಿಗೆ ರೂಪ ನೀಡುವಲ್ಲಿ ಮಹತ್ವದ ಪಾತ್ರ ವಹಿಸಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಬಾಹ್ಯಾಕಾಶ ಕ್ಷೇತ್ರದಲ್ಲಿ ಭಾರತ ಅಭೂತಪೂರ್ವ ಸಾಧನೆ: ತಂತ್ರಜ್ಞಾನ ಜಗತ್ತನ್ನು ಅತ್ಯಂತ ವೇಗವಾಗಿ ಬದಲಾಯಿಸುತ್ತಿದೆ. ಈ ಬದಲಾವಣೆಯಲ್ಲಿ ಯಾವುದೇ ದೇಶ ಹಿಂದೆ ಉಳಿಯುವ ಅಪಾಯವನ್ನು ಎದುರಿಸಲು ಸಾಧ್ಯವಿಲ್ಲ. ಕಳೆದ ಒಂದು ದಶಕದಲ್ಲಿ ಭಾರತವು ಖಗೋಳ ವಿಜ್ಞಾನ, ಖಗೋಳ ಭೌತಶಾಸ್ತ್ರ ಮತ್ತು ಬಾಹ್ಯಾಕಾಶ ಕ್ಷೇತ್ರಗಳಲ್ಲಿ ಅಭೂತಪೂರ್ವ ಪ್ರಗತಿ ಸಾಧಿಸಿದೆ. ದೇಶದಲ್ಲಿ ಹೊಸ ದೂರದರ್ಶಕಗಳನ್ನು ಸ್ಥಾಪಿಸಲಾಗಿದೆ. ಬಾಹ್ಯಾಕಾಶ ಸಂಶೋಧನೆಯ ಹಲವು ಕಠಿಣ ಕ್ಷೇತ್ರಗಳಲ್ಲಿ ಭಾರತ ಇಂದು ವಿಶ್ವದ ಕೆಲವೇ ರಾಷ್ಟ್ರಗಳ ಸಾಲಿನಲ್ಲಿ ಗುರುತಿಸಿಕೊಂಡಿದೆ ಎಂದರು.

ಚಂದ್ರಯಾನ–3 ಯೋಜನೆಯ ಮೂಲಕ ಚಂದ್ರನ ದಕ್ಷಿಣ ಧ್ರುವದ ಸಮೀಪ ಇಳಿದ ವಿಶ್ವದ ಮೊದಲ ದೇಶ ಎಂಬ ಹೆಗ್ಗಳಿಕೆಗೆ ಭಾರತ ಪಾತ್ರವಾಗಿದೆ. ಆದಿತ್ಯ ಎಲ್–1 ಯೋಜನೆಯ ಮೂಲಕ ಸೂರ್ಯನ ಅಧ್ಯಯನಕ್ಕಾಗಿ ಭಾರತದ ಮೊದಲ ಬಾಹ್ಯಾಕಾಶ ಸೌರ ವೀಕ್ಷಣಾಲಯವನ್ನು ಸ್ಥಾಪಿಸಲಾಗಿದೆ. ಬಾಹ್ಯಾಕಾಶದಲ್ಲಿ ಡಾಕಿಂಗ್ ಮತ್ತು ಅನ್‌ಡಾಕಿಂಗ್ ಸಾಮರ್ಥ್ಯ ಪ್ರದರ್ಶಿಸಿದ ವಿಶ್ವದ ನಾಲ್ಕನೇ ರಾಷ್ಟ್ರವಾಗಿ ಭಾರತ ಹೊರಹೊಮ್ಮಿದೆ.

ಇದೇ ಅವಧಿಯಲ್ಲಿ ಭಾರತೀಯ ಗಗನಯಾತ್ರಿಯೊಬ್ಬರು ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣಕ್ಕೆ ತೆರಳಿ ಹಲವು ಪ್ರಯೋಗಗಳನ್ನು ನಡೆಸಿದ್ದಾರೆ. ಈ ಅನುಭವವು ಭಾರತದ ಸ್ವಂತ ಮಾನವಸಹಿತ ಬಾಹ್ಯಾಕಾಶ ಯಾನ ಯೋಜನೆಯಾದ ಗಗನಯಾನಕ್ಕೆ ಸಹಕಾರಿಯಾಗಲಿದೆ ಎಂದು ಹೇಳಿದರು.

ಬಾಹ್ಯಾಕಾಶ ಕ್ಷೇತ್ರದಲ್ಲಿ ಯುವ ಉದ್ಯಮಿಗಳಿಗೆ ಹೊಸ ಅವಕಾಶ: ಕೇಂದ್ರ ಸರ್ಕಾರ ಬಾಹ್ಯಾಕಾಶ ಕ್ಷೇತ್ರವನ್ನು ಖಾಸಗಿ ವಲಯಕ್ಕೂ ಮುಕ್ತಗೊಳಿಸುವ ಮೂಲಕ ಹೊಸ ಅವಕಾಶಗಳನ್ನು ಸೃಷ್ಟಿಸಿದೆ. ಇದರಿಂದ ಭಾರತದ ಸ್ಟಾರ್ಟ್‌ಅಪ್‌ಗಳಿಗೆ ತಮ್ಮ ಸಾಮರ್ಥ್ಯ ಪ್ರದರ್ಶಿಸಲು ಅವಕಾಶ ದೊರೆತಿದೆ. ಇಂದು ಯುವ ಉದ್ಯಮಿಗಳು ಸ್ವಂತ ರಾಕೆಟ್‌ಗಳನ್ನು ಉಡಾವಣೆ ಮಾಡುತ್ತಿದ್ದಾರೆ, ಉಪಗ್ರಹಗಳನ್ನು ಕಕ್ಷೆಗೆ ಸೇರಿಸುತ್ತಿದ್ದಾರೆ ಹಾಗೂ ಹಿಂದೆ ಭಾರತದಲ್ಲಿ ನಡೆಯದಿದ್ದ ಹಲವು ಹೊಸ ಪ್ರಯೋಗಗಳನ್ನು ಬಾಹ್ಯಾಕಾಶ ಕ್ಷೇತ್ರದಲ್ಲಿ ಕೈಗೊಳ್ಳುತ್ತಿದ್ದಾರೆ.

ಹೊಸ ಆವಿಷ್ಕಾರಗಳಿಗೆ ಪ್ರೋತ್ಸಾಹ, ಹೊಸ ತಂತ್ರಜ್ಞಾನಗಳ ಅಭಿವೃದ್ಧಿ ಮತ್ತು ಯುವಜನರಿಗೆ ಹೊಸ ಅವಕಾಶಗಳನ್ನು ಸೃಷ್ಟಿಸುವುದೇ ನವಭಾರತದ ವೈಜ್ಞಾನಿಕ ದೃಷ್ಟಿಕೋನವಾಗಿದೆ ಎಂದರು.

ಮಾನವ ಕಲ್ಯಾಣಕ್ಕೆ ಸಮರ್ಪಿತ ಭಾರತದ ಬಾಹ್ಯಾಕಾಶ ಯೋಜನೆ: ಭಾರತವು ಸದಾ ಮಾನವೀಯತೆಯ ಹಿತಾಸಕ್ತಿಗೆ ಆದ್ಯತೆ ನೀಡುತ್ತಾ ಬಂದಿದೆ. ಭಾರತದ ಬಾಹ್ಯಾಕಾಶ ಯೋಜನೆಗಳೂ ಮಾನವ ಕಲ್ಯಾಣಕ್ಕೆ ಸಮರ್ಪಿತವಾಗಿವೆ. ಮೀನುಗಾರರ ಸುರಕ್ಷತೆಗಾಗಿ ಇಸ್ರೋ ವಿಶೇಷ ಉಪಗ್ರಹ ಆಧಾರಿತ ವ್ಯವಸ್ಥೆಯನ್ನು ಅಭಿವೃದ್ಧಿಪಡಿಸಿದೆ.

ವಿಜ್ಞಾನ ಮತ್ತು ಸಂಶೋಧನಾ ಕ್ಷೇತ್ರವನ್ನು ಬಲಪಡಿಸುವ ಉದ್ದೇಶದಿಂದ ಕೇಂದ್ರ ಸರ್ಕಾರ ಹಲವು ಮಹತ್ವದ ಉಪಕ್ರಮಗಳನ್ನು ಜಾರಿಗೊಳಿಸಿದೆ. ಅಟಲ್ ಟಿಂಕರಿಂಗ್ ಲ್ಯಾಬ್‌ಗಳ ಮೂಲಕ ಇದುವರೆಗೆ ಒಂದು ಕೋಟಿಗೂ ಹೆಚ್ಚು ವಿದ್ಯಾರ್ಥಿಗಳಿಗೆ ಹೊಸ ಆಲೋಚನೆಗಳ ಮೇಲೆ ಕಾರ್ಯನಿರ್ವಹಿಸಲು, ಪ್ರಯೋಗಗಳನ್ನು ನಡೆಸಲು ಹಾಗೂ ನಾವೀನ್ಯತೆಯನ್ನು ಬೆಳೆಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ ಎಂದು ಪ್ರಧಾನ ಮಂತ್ರಿ ನರೇಂದ್ರ ಮೋದಿ ತಿಳಿಸಿದರು.

ಸಂಶೋಧನೆಗೆ ಉತ್ತೇಜನ ನೀಡಲು ವಿದ್ಯಾರ್ಥಿಗಳು ಮತ್ತು ಸಂಶೋಧಕರಿಗೆ ಜಗತ್ತಿನ ಅತ್ಯುತ್ತಮ ವೈಜ್ಞಾನಿಕ ಸಂಶೋಧನಾ ಪ್ರಕಟಣೆಗಳು ಲಭ್ಯವಾಗಬೇಕು ಎಂಬ ಉದ್ದೇಶದಿಂದ 'ಒಂದು ರಾಷ್ಟ್ರ, ಒಂದು ಚಂದಾದಾರಿಕೆ' ಯೋಜನೆ ಆರಂಭಿಸಲಾಗಿದೆ. ಇದರಿಂದ ದೇಶದ ಶೈಕ್ಷಣಿಕ ಹಾಗೂ ಸಂಶೋಧನಾ ಸಂಸ್ಥೆಗಳಿಗೆ ಜಾಗತಿಕ ಮಟ್ಟದ ಪ್ರಮುಖ ವೈಜ್ಞಾನಿಕ ನಿಯತಕಾಲಿಕೆಗಳನ್ನು ಸುಲಭವಾಗಿ ಅಧ್ಯಯನ ಮಾಡಲು ನೆರವಾಗಲಿದೆ ಎಂದರು.

ಸಂಶೋಧನಾ ಕ್ಷೇತ್ರವನ್ನು ಮತ್ತಷ್ಟು ವಿಸ್ತರಿಸಲು 'ಅನುಸಂಧಾನ್ ನ್ಯಾಷನಲ್ ರಿಸರ್ಚ್ ಫೌಂಡೇಷನ್' ಸ್ಥಾಪಿಸಲಾಗಿದೆ. ಇದರ ಮೂಲಕ ಹೆಚ್ಚಿನ ವಿಶ್ವವಿದ್ಯಾಲಯಗಳಲ್ಲಿ ಹೊಸ ಸಂಶೋಧನೆಗಳಿಗೆ ನೆರವು ನೀಡಲಾಗುತ್ತಿದೆ. ಕಳೆದ ವರ್ಷ ಒಂದು ಲಕ್ಷ ಕೋಟಿ ರೂಪಾಯಿ ಮೊತ್ತದ ಸಂಶೋಧನೆ, ಅಭಿವೃದ್ಧಿ ಮತ್ತು ನಾವೀನ್ಯತಾ ಯೋಜನೆಯನ್ನೂ ಆರಂಭಿಸಲಾಗಿದ್ದು, ಸಂಶೋಧಕರಿಗೆ ಅಗತ್ಯವಾದ ಆರ್ಥಿಕ ನೆರವು ಒದಗಿಸುವುದರ ಜತೆಗೆ ಹೊಸ ತಂತ್ರಜ್ಞಾನಗಳನ್ನು ಪ್ರಯೋಗಾಲಯಗಳಿಂದ ಪ್ರಾಯೋಗಿಕ ಬಳಕೆಗೆ ತರುವುದಕ್ಕೆ ಸಹಕಾರಿಯಾಗಲಿದೆ ಎಂದು ಹೇಳಿದರು.

ದೇಶದಲ್ಲಿ ವಿಜ್ಞಾನ ಮತ್ತು ಸಂಶೋಧನೆಗೆ ಪೂರಕವಾದ ಬಲಿಷ್ಠ ವ್ಯವಸ್ಥೆ ರೂಪುಗೊಳ್ಳುತ್ತಿದೆ. ವಿಜ್ಞಾನ ಕ್ಷೇತ್ರದಲ್ಲಿ ಸಾಧನೆ ಮಾಡಲು ಯುವಜನರಲ್ಲಿ ಕುತೂಹಲ ಮತ್ತು ಪ್ರಶ್ನಿಸುವ ಮನೋ ಭಾವ ಬೆಳೆಸುವುದು ಅತ್ಯಂತ ಮುಖ್ಯ. ಈ ನಿಟ್ಟಿನಲ್ಲಿ ತಾರಾಲಯಗಳು ಮತ್ತು ವಿಜ್ಞಾನ ಕೇಂದ್ರಗಳು ಮಹತ್ವದ ಪಾತ್ರ ವಹಿಸುತ್ತವೆ ಎಂದರು.

COSMOS–Mysuru ತಾರಾಲಯದ ಆಡಳಿತ ಮಂಡಳಿ ಹಾಗೂ ಸಂಬಂಧಪಟ್ಟ ಎಲ್ಲರಿಗೂ ಮನವಿ ಮಾಡುತ್ತೇನೆ. ಶಾಲಾ–ಕಾಲೇಜುಗಳ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಈ ತಾರಾಲಯಕ್ಕೆ ಭೇಟಿ ನೀಡುವಂತೆ ಕಾರ್ಯಕ್ರಮ ರೂಪಿಸಿ, ಅವರಿಗೆ ಅಗತ್ಯ ವ್ಯವಸ್ಥೆ ಕಲ್ಪಿಸಬೇಕು. ಬ್ರಹ್ಮಾಂಡದ ಕುರಿತು ತಿಳಿದುಕೊಳ್ಳಲು ಇಲ್ಲಿಗೆ ಬರುವ ಮಕ್ಕಳಲ್ಲಿ ಕೆಲವರು ಭವಿಷ್ಯದಲ್ಲಿ ವಿಜ್ಞಾನಿಗಳಾಗಿ, ಬ್ರಹ್ಮಾಂಡದ ಕುರಿತು ಹೊಸ ಸಂಶೋಧನೆಗಳನ್ನು ನಡೆಸಿ ತಮ್ಮ ಆವಿಷ್ಕಾರಗಳನ್ನು ಜಗತ್ತಿಗೆ ಪರಿಚಯಿಸಬಹುದು. ಅದುವೇ ಈ COSMOS ತಾರಾಲಯದ ಅತ್ಯಂತ ದೊಡ್ಡ ಯಶಸ್ಸಾಗಲಿದೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು.

'ಬಲಿತ ದಲಿತ ಪೋಸ್ಟರ್' ಬದಲು ಚಿ.ನಾ.ರಾಮು ಬರೆದಿರುವ 'ಬಲಿತ ದಲಿತ ತುಳಿತ; ನನ್ನ ಜನ ಅನಾಥ' ಪುಸ್ತಕ ಓದಿ'

● ವಿಕ್ರಮ ವಾಹಿನಿ । ತುಮಕೂರು

ಬಲಿತ ದಲಿತ ಎಂದು ನನ್ನ ವಿರುದ್ಧ ಪೋಸ್ಟರ್ಗಳನ್ನು ಅಂಟಿಸುತ್ತಿರುವ ಕಿಡಿಗೇಡಿಗಳು ಮೊದಲು ಚಿ.ನಾ.ರಾಮು ಅವರು ಬರೆದಿರುವ 'ಬಲಿತ ದಲಿತ ತುಳಿತ; ನನ್ನ ಜನ ಅನಾಥ' ಎನ್ನುವ ಪುಸ್ತಕವನ್ನು ಮೊದಲು ಓದಲಿ ಎಂದು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರು ಹೇಳಿದರು.

ಗುಬ್ಬಿ ತಾಲೂಕಿನ ಸಿ.ಎಸ್. ಪುರದಲ್ಲಿ ಸುದ್ದಿಗಾರರು ಕೇಳಿದ ಪ್ರಶ್ನೆಗಳಿಗೆ ಉತ್ತರಿಸಿದ ಸಚಿವರು, ಬಲಿತ ದಲಿತ ಎನ್ನುವ ಪದ ಪ್ರಯೋಗವನ್ನು ನಾನು ಮಾಡಿದ್ದಲ್ಲ. ಕಳೆದ 78 ವರ್ಗಗಳಿಂದ ಮೀಸಲಾತಿ ಸೌಲಭ್ಯದಿಂದ ವಂಚಿತರಾಗಿರುವ ಅತ್ಯಂತ ದುರ್ಬಲರ ಮತ್ತು ಶೋಷಿತರ ಬಗ್ಗೆ ಬಳಸಿರುವ ಪದವಿದು. ಈಗ ಬಲಿತ ದಲಿತ ಎಂದು ಬೇಜಾರು ಮಾಡಿಕೊಳ್ಳುತ್ತಿರುವವರಿಗೆ ದಲಿತ ಎನ್ನುವ ಪದ ಸೂಕ್ತ ಆಗುವುದಿಲ್ಲ ಎಂದರು.

'ಬಲಿತ ದಲಿತ' ಎಂಬ ಪೋಸ್ಟರ್ ಬಗ್ಗೆ ತೀಕ್ಷ್ಣವಾಗಿ ಪ್ರತಿಕ್ರಿಯಿಸಿದ ಅವರು, ಇದರಲ್ಲಿ ಯಾವುದೇ ತಪ್ಪಿಲ್ಲ ಎಂದರು. 'ಬಲಿತ, ದಲಿತ, ತುಳಿತ' ಎಂಬ ಪುಸ್ತಕದಲ್ಲಿ ಎಲ್ಲವನ್ನೂ ಕಣ್ಣಿಗೆ ಕಟ್ಟಿದಂತೆ ಬರೆದಿದ್ದಾರೆ. ಅದನ್ನು ಓದಿದರೆ ಸತ್ಯ ಏನು ಎಂಬುದು ಅರ್ಥವಾಗುತ್ತದೆ. ಕಳೆದ 78 ವರ್ಷಗಳಲ್ಲಿ ದಲಿತರನ್ನು ಯಾರು ತುಳಿದಿದ್ದಾರೆ ಎಂಬುದರ ಸಂಪೂರ್ಣ ವಿವರ ಆ ಪುಸ್ತಕದಲ್ಲಿದೆ ಎಂದು ಸಚಿವರು ಹೇಳಿದರು.

ನಾನು ದಲಿತರಿಗೆ ಯಾವುದೇ ಅವಮಾನ ಮಾಡಿಲ್ಲ; ಬದಲಾಗಿ ಅತ್ಯಂತ ತಳಮಟ್ಟದಲ್ಲಿರುವ ದಲಿತರನ್ನು ಮೇಲೆತ್ತಬೇಕು ಎಂದು ಹೇಳಿದ್ದೇನೆ. ಆದರೆ ದಲಿತರ ಹೆಸರಿನಲ್ಲಿ ಬಲಿತವರು ಬಡ ದಲಿತರನ್ನು ಇನ್ನೂ ಕೈಯೊಡ್ಡುವ ಪರಿಸ್ಥಿತಿಯಲ್ಲಿಯೇ ಇಟ್ಟಿದ್ದಾರೆ ಎಂದು ಅವರು ವಾಗ್ದಾಳಿ ನಡೆಸಿದರು.

ತಮ್ಮ ಮೇಲೆ ರಿಯಲ್ ಎಸ್ಟೇಟ್ ವ್ಯವಹಾರದ ಆರೋಪ ಮಾಡಿರುವ ಕಾಂಗ್ರೆಸ್ ನಾಯಕರಿಗೆ ಸವಾಲು ಹಾಕಿದ ಕುಮಾರಸ್ವಾಮಿ ಅವರು, ನಾನು ಎಲ್ಲಾದರೂ ರಿಯಲ್ ಎಸ್ಟೇಟ್ ಮಾಡಿದ್ದೀನಾ ಎಂದು ಪ್ರಶ್ನಿಸಿದರು.

ಮುಂಬೈ ಅಥವಾ ಹೈದರಾಬಾದ್‌ನಲ್ಲಿ ನನ್ನ ಆಸ್ತಿ ಎಲ್ಲಿದೆ ಎಂಬುದನ್ನು ಬೇಕಾದರೆ ಬಿಚ್ಚಿಡಲಿ ಎಂದು ಸವಾಲೆಸೆದ ಅವರು, 1983ರಲ್ಲಿ ನಾನು ಸಿನಿಮಾ ರಂಗದಲ್ಲಿದ್ದಾಗ ಖರೀದಿಸಿದ ಜಮೀನು ಬಿಟ್ಟರೆ, ಬೇರೆ ಯಾವುದೇ ರೈತರ ಭೂಮಿಗೆ ಧೋಕಾ ಮಾಡಿ ಕಸಿದುಕೊಂಡಿಲ್ಲ ಎಂದು ಸ್ಪಷ್ಟಪಡಿಸಿದರು. ನನ್ನ ಬಗ್ಗೆ ಚರ್ಚೆ ಮಾಡುವ ಯಾವುದೇ ನೈತಿಕತೆ ಕಾಂಗ್ರೆಸ್ ನಾಯಕರಿಗಿಲ್ಲ ಎಂದು ಗುಡುಗಿದರು.



ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಇಂಜಿನಿಯರ್‌ಗಳ ನೇಮಕದಲ್ಲಿ ಆಗಿರುವ ಅಕ್ರಮದ ಬಗ್ಗೆ ಬೇಕಾದಷ್ಟು ದಾಖಲೆಗಳನ್ನು ಬಿಡುಗಡೆ ಮಾಡಿದ್ದೇನೆ. ಅದರ ಬಗ್ಗೆ ಆ ವ್ಯಕ್ತಿ ತುಟಿ ಬಿಚ್ಚುತ್ತಿಲ್ಲ ಎಂದು ಸಚಿವರು ತರಾಟೆಗೆ ತೆಗೆದುಕೊಂಡರು. ನಾನು ದಲಿತರಿಗೆ ಯಾವುದೇ ಅವಮಾನ ಮಾಡಿಲ್ಲ; ಬದಲಾಗಿ ಅತ್ಯಂತ ತಳಮಟ್ಟದಲ್ಲಿರುವ ದಲಿತರನ್ನು ಮೇಲೆತ್ತಬೇಕು ಎಂದು ಹೇಳಿದ್ದೇನೆ.

ನನ್ನ ಬಗ್ಗೆ ಇಂತಹ ಸುಳ್ಳು ಆರೋಪಗಳನ್ನು ಮಾಡುವ ವ್ಯಕ್ತಿ ಕೆಪಿಎಸ್ಸಿ ನೇಮಕಾತಿಯಲ್ಲಿ ಏನೆಲ್ಲ ಅಕ್ರಮಗಳನ್ನು ಎಸಗಿದ್ದಾರೆ ಎಂದು ದಾಖಲೆಗಳ ಸಮೇತ ಜನರ ಮುಂದೆ ಇಟ್ಟಿದ್ದೇನೆ. ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಇಂಜಿನಿಯರ್‌ಗಳ ನೇಮಕದಲ್ಲಿ ಆಗಿರುವ ಅಕ್ರಮದ ಬಗ್ಗೆ ಬೇಕಾದಷ್ಟು ದಾಖಲೆಗಳನ್ನು ಬಿಡುಗಡೆ ಮಾಡಿದ್ದೇನೆ. ಅದರ ಬಗ್ಗೆ ಆ ವ್ಯಕ್ತಿ ತುಟಿ ಬಿಚ್ಚುತ್ತಿಲ್ಲ ಎಂದು ಸಚಿವರು ತರಾಟೆಗೆ ತೆಗೆದುಕೊಂಡರು. ನಾನು ದಲಿತರಿಗೆ ಯಾವುದೇ ಅವಮಾನ ಮಾಡಿಲ್ಲ; ಬದಲಾಗಿ ಅತ್ಯಂತ ತಳಮಟ್ಟದಲ್ಲಿರುವ ದಲಿತರನ್ನು ಮೇಲೆತ್ತಬೇಕು ಎಂದು ಹೇಳಿದ್ದೇನೆ. ಆದರೆ ದಲಿತರ ಹೆಸರಿನಲ್ಲಿ ಬಲಿತವರು ಬಡ ದಲಿತರನ್ನು ಇನ್ನೂ ಕೈಯೊಡ್ಡುವ ಪರಿಸ್ಥಿತಿಯಲ್ಲಿಯೇ ಇಟ್ಟಿದ್ದಾರೆ ಎಂದು ಅವರು ವಾಗ್ದಾಳಿ ನಡೆಸಿದರು.

ಕಾಂಗ್ರೆಸ್ ಪಕ್ಷದ ಮುಖಂಡರು ಮತ್ತು ಕಾರ್ಯಕರ್ತರು ಸಿನಿಮಾ ಬಿಡುಗಡೆಯ ಮಾದರಿಯಲ್ಲಿ ಐದಾರು ರೀತಿಯ ಪೋಸ್ಟರ್‌ಗಳನ್ನು ವಿನ್ಯಾಸಗೊಳಿಸಿ ನಮ್ಮನೆಯ ಮುಂದೆ ಅಂಟಿಸಿದ್ದಾರೆ. ಈ ಪೋಸ್ಟರ್‌ಗಳನ್ನು ನನ್ನ ಮನೆಯ ಮುಂದೆ ಅಂಟಿಸುವ ಬದಲು ಕಾಂಗ್ರೆಸ್ ಕಚೇರಿ ಅಥವಾ ಕಾಂಗ್ರೆಸ್ ಮುಖಂಡರ ಮನೆಗಳ ಮುಂದೆ ಅಂಟಿಸಿಕೊಂಡರೆ ಅವರ ಬೆಂಬಲಿಗರಿಗೆ ಅರ್ಥವಾಗುತ್ತದೆ ಎಂದು ಲೇವಡಿ ಮಾಡಿದರು ಸಚಿವರು.

ನಮ್ಮ ಮನೆಯ ಮುಂದೆ ಪೋಸ್ಟರ್ ಹಾಕಿದರೆ ಜನರಿಗೆ ಇನ್ನಷ್ಟು ಆಕ್ರೋಶ ಬರುತ್ತದೆ ಹಾಗೂ ಕಾಂಗ್ರೆಸ್ ಪಕ್ಷವು ಪಾತಾಳಕ್ಕೆ ಹೋಗುವ ಕಾಲ ಹತ್ತಿರಕ್ಕೆ ಬರುತ್ತದೆ ಎಂದು ಅವರು ಎಚ್ಚರಿಸಿದರು.

9 ವಾರ್ಡ್‌ಗಳ 18 ಪ್ರಮುಖ ರಸ್ತೆಗಳಲ್ಲಿ ವಿಶೇಷ ಸ್ವಚ್ಛತಾ ಕಾರ್ಯ

● ವಿಕ್ರಮ ವಾಹಿನಿ । ಬೆಂಗಳೂರು

ಬೆಂಗಳೂರು ದಕ್ಷಿಣ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಯಶಸ್ವಿಯಾಗಿ ನಡೆಯುತ್ತಿರುವ 'ವಾರ್ಡ್ ಒನ್' ಅಭಿಯಾನದ ಮುಂದುವರಿದ ಭಾಗವಾಗಿ ಮೂರನೇ ಹಂತದ ವಿಶೇಷ ಸ್ವಚ್ಛತಾ ಕಾರ್ಯಕ್ಕೆ ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ. ಪಾಲಿಕೆಯ ಐದು ವಿಭಾಗಗಳ ಒಂಬತ್ತು ವಾರ್ಡ್‌ಗಳ ಆಯ್ದ 18 ಪ್ರಮುಖ ರಸ್ತೆಗಳಲ್ಲಿ ವಿಶೇಷ ಸ್ವಚ್ಛತಾ ಅಭಿಯಾನ ಹಮ್ಮಿಕೊಳ್ಳಲಾಗುತ್ತಿದೆ ಎಂದು ಆಯುಕ್ತ ಕೆ.ಎನ್. ರಮೇಶ್ ತಿಳಿಸಿದ್ದಾರೆ.

ಅಭಿಯಾನದಡಿ ಸ್ವಚ್ಛತಾ ಕಾರ್ಯವನ್ನು ಪರಿಣಾಮಕಾರಿಯಾಗಿ ಕೈಗೊಳ್ಳಲು ಅಗತ್ಯ ಯಂತ್ರೋಪಕರಣಗಳು ಮತ್ತು ಸಿಬ್ಬಂದಿಯನ್ನು ನಿಯೋಜಿಸಲಾಗಿದೆ. ಒಟ್ಟು 14 ಜೆಸಿಬಿ, ನಾಲ್ಕು ಟಿಪ್ಪರ್‌ಗಳು, 54 ಟ್ರ್ಯಾಕ್ಟರ್‌ಗಳು ಹಾಗೂ 191 ಕಾರ್ಮಿಕರು ಕಾರ್ಯಾಚರಣೆಯಲ್ಲಿ ಪಾಲ್ಗೊಳ್ಳಲಿದ್ದಾರೆ. ಇವರೊಂದಿಗೆ ಮಾರ್ಷಲ್‌ಗಳು, ಪೌರಕಾರ್ಮಿಕರು ಮತ್ತು ಕಿರಿಯ ಆರೋಗ್ಯ ನಿರೀಕ್ಷಕರು ಕಾರ್ಯನಿರ್ವಹಿಸಲಿದ್ದಾರೆ.

ಅಂಜನಾಪುರ ಮತ್ತು ಬೇಗೂರು ವಿಭಾಗದ 36, 37 ಹಾಗೂ 38ನೇ ವಾರ್ಡ್‌ಗಳಲ್ಲಿ ಮೂರು ಜೆಸಿಬಿ, 20 ಟ್ರ್ಯಾಕ್ಟರ್‌ಗಳು ಮತ್ತು 80 ಕಾರ್ಮಿಕರನ್ನು ನಿಯೋಜಿಸಲಾಗಿದೆ. ಜಯನಗರ ವಿಭಾಗದ 16 ಮತ್ತು 8ನೇ ವಾರ್ಡ್‌ಗಳಲ್ಲಿ ಎರಡು ಜೆಸಿಬಿ, ಎರಡು ಟಿಪ್ಪರ್‌ಗಳು, 14 ಟ್ರ್ಯಾಕ್ಟರ್‌ಗಳು ಹಾಗೂ 42 ಕಾರ್ಮಿಕರು ಕಾರ್ಯನಿರ್ವಹಿಸಲಿದ್ದಾರೆ.

ಬಿಟಿಎಂ ಬಡಾವಣೆ ವಿಭಾಗದ 17 ಮತ್ತು 18ನೇ ವಾರ್ಡ್‌ಗಳಲ್ಲಿ ಏಳು ಜೆಸಿಬಿ, 14 ಟ್ರ್ಯಾಕ್ಟರ್‌ಗಳು ಹಾಗೂ 44 ಕಾರ್ಮಿಕರನ್ನು ನಿಯೋಜಿಸಲಾಗಿದೆ.



ಪದ್ಮನಾಭನಗರ ವಿಭಾಗದ ಒಂದನೇ ವಾರ್ಡ್‌ನಲ್ಲಿ ಒಂದು ಜೆಸಿಬಿ, ಒಂದು ಟಿಪ್ಪರ್, ನಾಲ್ಕು ಟ್ರ್ಯಾಕ್ಟರ್‌ಗಳು ಹಾಗೂ 15 ಕಾರ್ಮಿಕರು ಸ್ವಚ್ಛತಾ ಕಾರ್ಯದಲ್ಲಿ ತೊಡಗಲಿದ್ದಾರೆ. ಎಚ್‌ಎಸ್‌ಆರ್ ವಿಭಾಗದ 31ನೇ ವಾರ್ಡ್‌ನಲ್ಲಿ ಒಂದು ಜೆಸಿಬಿ, ಒಂದು ಟಿಪ್ಪರ್, ಎರಡು ಟ್ರ್ಯಾಕ್ಟರ್‌ಗಳು ಹಾಗೂ 10 ಕಾರ್ಮಿಕರನ್ನು ನಿಯೋಜಿಸಲಾಗಿದೆ.

ಅಂಜನಾಪುರ ಮತ್ತು ಬೇಗೂರು ವಿಭಾಗದ ಬೇಗೂರು ವಾರ್ಡ್‌ನ ಹೊಗೆಬಂಡಿ ಮುಖ್ಯ ರಸ್ತೆ, ಯಲಹಳ್ಳಿ ವಾರ್ಡ್‌ನ ಬೇಗೂರು–ಹುಳಿಮಾವು ಮುಖ್ಯ ರಸ್ತೆ ಹಾಗೂ ದೊಡ್ಡಕಮ್ಮನಹಳ್ಳಿ ವಾರ್ಡ್‌ನ ಬನ್ನೇರುಘಟ್ಟ ಮುಖ್ಯ ರಸ್ತೆ ಮತ್ತು ದೊಡ್ಡಕಮ್ಮನಹಳ್ಳಿ ಮುಖ್ಯ ರಸ್ತೆಯಲ್ಲಿ ಸ್ವಚ್ಛತಾ ಕಾರ್ಯ ನಡೆಯಲಿದೆ.

ಜಯನಗರ ವಿಭಾಗದ ಸಾರಕ್ಕಿ ವಾರ್ಡ್‌ನ ಬನ್ನೇರುಘಟ್ಟ ಮುಖ್ಯ ರಸ್ತೆ ಮತ್ತು ತಿಲಕನಗರ ವಾರ್ಡ್‌ನ ಈಸ್ಟ್ ಎಂಡ್ ಮುಖ್ಯ ರಸ್ತೆಯನ್ನು ಸ್ವಚ್ಛಗೊಳಿಸಲಾಗುತ್ತದೆ.

ಬಿಟಿಎಂ ಬಡಾವಣೆ ವಿಭಾಗದ ಎನ್. ಎಸ್. ಪಾಳ್ಯ ಮತ್ತು ವಿಶ್ವಮಾನವ ಕುವೆಂಪು ವಾರ್ಡ್‌ಗಳ ವ್ಯಾಪ್ತಿಯಲ್ಲಿ ಲೇಕ್ ರಸ್ತೆ, ಹೊರ ವರ್ತುಲ ರಸ್ತೆ, 29ನೇ ಮುಖ್ಯ ರಸ್ತೆ, ಬನ್ನೇರುಘಟ್ಟ ಮುಖ್ಯ ರಸ್ತೆ, 16ನೇ ಮುಖ್ಯ ರಸ್ತೆ, 7ನೇ ಮುಖ್ಯ ರಸ್ತೆ ಹಾಗೂ 7ನೇ ಅಡ್ಡರಸ್ತೆಯಲ್ಲಿ ಅಭಿಯಾನ ನಡೆಯಲಿದೆ.

ಏಪ್ರಿಲ್‌ನಲ್ಲಿ ಹೂಡಿಕೆದಾರರ ಸಮಾವೇಶ: ಎಂ.ಬಿ.ಪಾ

● ವಿಕ್ರಮ ವಾಹಿನಿ । ಬೆಂಗಳೂರು

ನಗರದ ಅರಮನೆ ಮೈದಾನದಲ್ಲಿ ಏಪ್ರಿಲ್ 20ರಿಂದ 22ರವರೆಗೆ ಜಾಗತಿಕ ಹೂಡಿಕೆದಾರರ ಸಮಾವೇಶ ನಡೆಯಲಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ ಹೇಳಿದ್ದಾರೆ.

ಹೂಡಿಕೆದಾರರ ಸಮಾವೇಶದ ಹಿನ್ನೆಲೆಯಲ್ಲಿ ನಡೆದ ಪೂರ್ವಭಾವಿ ಕಾರ್ಯ ಕ್ರಮದಲ್ಲಿ ಮಾತನಾಡಿದ ಅವರು, ಇದು ವಿಶ್ವ ಮಟ್ಟದ ಉಪಕ್ರಮವಾಗಿದ್ದು, ಇದಕ್ಕೆ ಪೂರಕವಾಗಿ ನೂತನ ವೈಮಾಂತರಿಕ್ಷ ಮತ್ತು ರಕ್ಷಣಾ ನೀತಿ (2026–31), ಕೆಐಎಡಿಬಿ ಮೂಲಕ ಡಿಜಿಟಲ್ ಕೈಗಾರಿಕಾ ಭೂಬ್ಯಾಂಕ್ ವ್ಯವಸ್ಥೆಗೆ ಚಾಲನೆ ನೀಡಲಾಗಿದೆ ಎಂದು ತಿಳಿಸಿದರು. ಸಮಾವೇಶದ ಭಾಗವಾಗಿ ವೆಂಚುರೈಸ್‌ನ ಮೂರನೇ ಆವೃತ್ತಿ ಹಾಗೂ ಕೆಐಎಡಿಬಿ ಡಿಜಿಟಲ್ ಕೈಗಾರಿಕಾ ಭೂ ಬ್ಯಾಂಕ್‌ಗೆ ಚಾಲನೆ ನೀಡಿದ್ದೇವೆ. ಇವೆರಡೂ ವಿಭಿನ್ನ ಉದ್ದೇಶಗಳನ್ನು ಹೊಂದಿದ್ದರೂ, ಒಂದಕ್ಕೊಂದು ಪೂರಕವಾಗಿವೆ. ಒಂದು ನಾಳಿನ ಉದ್ಯಮಗಳನ್ನು ರೂಪಿಸುವುದರ ಬಗ್ಗೆ ಗಮನಹರಿಸಿದರೆ, ಮತ್ತೊಂದು ಇಂದೇ ಆ ಉದ್ಯಮಗಳನ್ನು ಸ್ಥಾಪಿಸುವ ಪ್ರಕ್ರಿಯೆಯನ್ನು ಸುಲಭಗೊಳಿಸುತ್ತದೆ. ಮಹತ್ವಾಕಾಂಕ್ಷೆಗೆ ಕಾರ್ಯರೂಪದ ಬೆಂಬಲ ನೀಡುವುದೇ ಜಾಗತಿಕ ಹೂಡಿಕೆದಾರರ ಸಮಾವೇಶ– 2027ರ ಆಶಯ ಎಂಬುದನ್ನು ಈ ಎರಡೂ ಉಪಕ್ರಮಗಳು ಸಾರುತ್ತವೆ ಎಂದು ಹೇಳಿದರು. ಈ ಸಮಾರಂಭವು ಈ ಎಲ್ಲ ಸಾಧನೆಗಳನ್ನೂ, ಹೂಡಿಕೆಯ ಭರವಸೆ ಯನ್ನು ಯೋಜನೆಗಳಾಗಿ ಪರಿವರ್ತಿಸಿದ ಪ್ರತಿಯೊಂದು ಕಂಪನಿಯ ಕೊಡುಗೆಯನ್ನೂ ಸಂಭ್ರಮಿಸುವ ಸಂದರ್ಭ ಇದಾಗಿದೆ ಎಂದರು. ಜಾಗತಿ ಹೂಡಿಕೆದಾರರ ಸಮಾವೇಶ– 2027 ಅನ್ನು ನಿಜವಾದ ಅರ್ಥದಲ್ಲಿ ಜಾಗತಿಕ ಹೂಡಿಕೆದಾರರ ಸಮಾವೇಶವನ್ನಾಗಿ ರೂಪಿಸುವುದು ನಮ ಸ್ಪಷ್ಟ ಗುರಿಯಾಗಿದೆ. ಈ ನಿಟ್ಟಿನಲ್ಲಿ ಉತ್ತರ ಕರ್ನಾಟಕದಲ್ಲಿ ವಿಶೇಷ ಹೂಡಿಕೆದಾರರ ಸಮಾವೇಶ ಆಯೋಜಿಸಲಿದ್ದೇವೆ ಎಂದರು.

www.VIKRAMAVAHINI.com || ಕನ್ನಡ ದಿನಪತ್ರಿಕೆ || PRGI NO: KARKAN/2018/78481

ವಿಕ್ರಮ ವಾಹಿನಿ — ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ —



ಪಟಾಕಿ ಸಿಡಿಸುವ ಸಮಯದ ನಿಯಮ ಉಲ್ಲಂಘನೆಗೆ ಹೈಕೋರ್ಟ್ ಕಳವಳ

● ವಿಕ್ರಮ ವಾಹಿನಿ । ಬೆಂಗಳೂರು

ದೀಪಾವಳಿ ಹಬ್ಬದ ಸಂದರ್ಭದಲ್ಲಿ ಬೆಂಗಳೂರು ಸೇರಿದಂತೆ ರಾಜ್ಯಾದ್ಯಂತ ನಿಗದಿತ ಸಮಯ ಮೀರಿ ತಡರಾತ್ರಿವರೆಗೂ ಪಟಾಕಿ ಸಿಡಿಸಲಾಗುತ್ತಿರುವ ಬಗ್ಗೆ ಕರ್ನಾಟಕ ಹೈಕೋರ್ಟ್ ಕಳವಳ ವ್ಯಕ್ತಪಡಿಸಿದೆ. ಪಟಾಕಿಗಳ ಮಾರಾಟ ಮತ್ತು ಬಳಕೆ ನಿಯಂತ್ರಣಕ್ಕೆ ಸಂಬಂಧಿಸಿದ ಸುಪ್ರೀಂಕೋರ್ಟ್ ಮಾರ್ಗಸೂಚಿಗಳ ಅನುಷ್ಠಾನಕ್ಕೆ ಕೈಗೊಂಡಿರುವ ಕ್ರಮಗಳ ಕುರಿತು ಮೂರು ವಾರಗಳಲ್ಲಿ ವಿವರವಾದ ವರದಿ ಸಲ್ಲಿಸುವಂತೆ ರಾಜ್ಯ ಸರ್ಕಾರಕ್ಕೆ ನಿರ್ದೇಶನ ನೀಡಿದೆ.

ಪಟಾಕಿ ಸಿಡಿಸುವ ವಿಚಾರದಲ್ಲಿ ಸುಪ್ರೀಂಕೋರ್ಟ್ ಮಾರ್ಗಸೂಚಿಗಳನ್ನು ಉಲ್ಲಂಘಿಸಲಾಗುತ್ತಿದೆ ಎಂದು ಆಕ್ಷೇಪಿಸಿ ಬೆಂಗಳೂರಿನ ವಿನೋದ್ ಜಾಕೋಬ್ ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಅನು ಶಿವರಾಮನ್ ಮತ್ತು ನ್ಯಾಯಮೂರ್ತಿ ಕೆ.ಎಸ್. ಭರತ್ ಕುಮಾರ್ ಅವರಿದ್ದ ವಿಭಾಗೀಯ ನ್ಯಾಯಪೀಠ ಈ ಸೂಚನೆ ನೀಡಿದೆ.

ದೀಪಾವಳಿ ಸಂದರ್ಭದಲ್ಲಿ ಪಟಾಕಿ ಸಿಡಿಸಲು ರಾತ್ರಿ 8ರಿಂದ 10 ಗಂಟೆಯವರೆಗೆ ಮಾತ್ರ ಅವಕಾಶವಿದ್ದರೂ ಈ ಸಮಯದ ಮಿತಿಯನ್ನು ಕಟ್ಟುನಿಟ್ಟಾಗಿ ಪಾಲಿಸಲಾಗುತ್ತಿಲ್ಲ ಎಂದು ನ್ಯಾಯಾಲಯ ಗಮನಿಸಿದೆ. ರಾತ್ರಿ 9.30ರ ನಂತರ ಪಟಾಕಿ ಸಿಡಿಸುವುದು ಆರಂಭವಾಗಿ ನಸುಕಿನವರೆಗೂ ಮುಂದುವರಿಯುತ್ತಿದೆ. ನಿಗದಿಪಡಿಸಿರುವ ಸಮಯದ ಮಿತಿಯನ್ನು ಕಡ್ಡಾಯವಾಗಿ ಪಾಲಿಸಬೇಕು ಎಂದು ನ್ಯಾಯಪೀಠ ಮೌಖಿಕವಾಗಿ ತಿಳಿಸಿದೆ.

ಪಟಾಕಿ ಬಳಕೆಗೆ ಸಮಯದ ನಿಯಂತ್ರಣ ಅಗತ್ಯ ಎಂಬುದನ್ನು ಪುನರುಚ್ಚರಿಸಿದ ನ್ಯಾಯಾಲಯ, ಪ್ರತಿವಾದಿಗಳಾದ ರಾಜ್ಯ ಸರ್ಕಾರ ಮತ್ತು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಗೆ ನೋಟಿಸ್ ಜಾರಿಗೊಳಿಸಿದೆ. ಪ್ರಕರಣದ ಮುಂದಿನ ವಿಚಾರಣೆಯನ್ನು ಡಿಸೆಂಬರ್ 9ಕ್ಕೆ ನಿಗದಿಪಡಿಸಿದೆ.

ಪಂಚಾಯ್ತಿ ಅಧ್ಯಕ್ಷರಾಗಿ ಮಕ್ಕಳ ಅಹವಾಲಿಗೆ ಸ್ಪಂದಿಸಿದ ಈಶ್ವರ ಖಂಡ್ರೆ



● ವಿಕ್ರಮ ವಾಹಿನಿ । ಬೆಂಗಳೂರು

ಯಾವುದೇ ಗ್ರಾಮ ಪಂಚಾಯತಿ ವ್ಯಾಪ್ತಿಯ ಶಾಲೆಯಲ್ಲಿ ಶೌಚಾಲಯ ಅಥವಾ ಕುಡಿಯುವ ನೀರಿನ ಸಮಸ್ಯೆ ಇದ್ದರೆ ಪರಿಹರಿಸಲಾಗುವುದು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಮಕ್ಕಳಿಗೆ ಭರವಸೆ ನೀಡಿದರು.

ಜಕ್ಕೂರಿನಲ್ಲಿರುವ ಮಹಾತ್ಮಾಗಾಂಧೀ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆಯಲ್ಲಿಂದು ನಡೆದ ಮಕ್ಕಳ ಗ್ರಾಮಸಭೆಯ ಅಧ್ಯಕ್ಷತೆ ವಹಿಸಿ ಮಕ್ಕಳ ಅಹವಾಲು ಆಲಿಸಿದ ಅವರು, ಪ್ರತಿಯೊಂದು ಶಾಲೆಯಲ್ಲೂ ಬಾಲಕ, ಬಾಲಕಿಯರಿಗೆ ಪ್ರತ್ಯೇಕ ಶೌಚಾಲಯ ಇರಬೇಕು, ಶುದ್ಧ ಕುಡಿಯುವ ನೀರು ಪೂರೈಕೆ ಮಾಡಬೇಕು ಎಂಬ ಸ್ಪಷ್ಟ ಸೂಚನೆ ನೀಡಲಾಗಿದೆ. ಯಾವುದೇ ಶಾಲೆಯಲ್ಲಿ ಸಮಸ್ಯೆ ಇದ್ದರೆ ಪರಿಹರಿಸುವಂತೆ ಸೂಚಿಸಲಾಗುವುದು ಎಂದರು. ರಾಜ್ಯದಲ್ಲಿರುವ ಎಲ್ಲ 5927 ಗ್ರಾಮ ಪಂಚಾಯತಿಗಳಿಗೂ ಈ ಬಗ್ಗೆ ಮತ್ತೊಮ್ಮೆ ಸೂಚನೆ ನೀಡುವುದಾಗಿಯೂ ಸಚಿವರು ತಿಳಿಸಿದರು.

ಘನ ತ್ಯಾಜ್ಯ, ಹಸಿ ತ್ಯಾಜ್ಯದ ಸಮಸ್ಯೆ ಈಗ ಗ್ರಾಮೀಣ ಪ್ರದೇಶದಲ್ಲೂ ಹೆಚ್ಚಾಗುತ್ತಿದೆ. ತ್ಯಾಜ್ಯದ ವೈಜ್ಞಾನಿಕ ವಿಲೇವಾರಿಗೆ ಇಲಾಖೆ ಕ್ರಮ ಕೈಗೊಂಡಿದೆ. ಮಕ್ಕಳು ಕೂಡ ತಮ್ಮ ಪಾಲಕರಿಗೆ ಹಸಿ ಕಸ ಒಣ ಕಸ ವಿಂಗಡಿಸುವ ಬಗ್ಗೆ ತಿಳಿಯ ಹೇಳಬೇಕು. ಎಲ್ಲೆಂದರಲ್ಲಿ ಕಸ ಎಸೆಯುವ ಪ್ರವೃತ್ತಿಯನ್ನು ಬಿಡಬೇಕು. ಸಹಪಾಠಿಗಳಿಗೂ ಈ ಬಗ್ಗೆ ಜಾಗೃತಿ ಮೂಡಿಸಬೇಕು ಎಂದು ಹೇಳಿದರು.

ಅಪಾಯಕಾರಿ ತ್ಯಾಜ್ಯದ ವಿಲೇವಾರಿ ವೈಜ್ಞಾನಿಕವಾಗಿ ಆಗಬೇಕು ಎಂದ ಅವರು ಸರ್ಕಾರ ಕಸದಿಂದ ರಸ ಅಂದರೆ ಕಸದಿಂದಲೂ ಆದಾಯ ಸೃಜನೆಗೆ ಕ್ರಮ ವಹಿಸಿದೆ ಎಂದರು. ಬೀದಿ ನಾಯಿಗಳ ಕಾಟದ ಬಗ್ಗೆ ಮಕ್ಕಳು ಕೇಳಿದ ಮತ್ತೊಂದು ಪ್ರಶ್ನೆಗೆ ಉತ್ತರಿಸಿದ ಸಚಿವರು ತಾವು ಅರಣ್ಯ ಸಚಿವರಾಗಿದ್ದಾಗ ಎದುರಾಗುತ್ತಿದ್ದ ಮಾನವ–ವನ್ಯಜೀವಿ ಸಂಘರ್ಷದ ಬಗ್ಗೆ ವಿವರಿಸಿ, ಬೀದಿ ನಾಯಿಗಳ ಸಂತಾನ ಹರಣ ಶಸ್ತ್ರಚಿಕಿತ್ಸೆಗೆ ಸ್ಥಳೀಯ ಆಡಳಿತ ಕ್ರಮ ವಹಿಸುತ್ತದೆ ಎಂದರು.



ಶುಕ್ರವಾರ ವಿವಿಧ ಕಾರ್ಯಕ್ರಮಗಳ ಉದ್ಘಾಟನೆಗಾಗಿ ಬೆಂಗಳೂರಿಗೆ ಆಗಮಿಸಿದ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರನ್ನು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಸ್ವಾಗತಿಸಿದರು.

ವಿವಿಧ ಕ್ರೀಡಾ ವಿಭಾಗಗಳಲ್ಲಿ ಸಾಧನೆ ಮಾಡಿದ ಕ್ರೀಡಾಪಟುಗಳಿಗೆ ಕ್ರೀಡಾಪ್ರಶಸ್ತಿ ಪ್ರಧಾನ

● ವಿಕ್ರಮ ವಾಹಿನಿ । ನವದೆಹಲಿ

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ರಾಷ್ಟ್ರಪತಿ ಭವನದಲ್ಲಿ ನಡೆದ ಸಮಾರಂಭದಲ್ಲಿ 2025ನೇ ಸಾಲಿನ ರಾಷ್ಟ್ರೀಯ ಕ್ರೀಡಾ ಪ್ರಶಸ್ತಿಗಳನ್ನು ಪ್ರದಾನ ಮಾಡಿದರು. ವಿವಿಧ ಕ್ರೀಡಾ ವಿಭಾಗಗಳಲ್ಲಿ ಸಾಧನೆ ಮಾಡಿದ 17 ಕ್ರೀಡಾಪಟುಗಳಿಗೆ ಅರ್ಜುನ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ದೇಶದ ಅತ್ಯುನ್ನತ ಕ್ರೀಡಾ ಗೌರವವಾದ ಮೇಜರ್ ಧ್ಯಾನ್‌ಚಂದ್ ಖೇಲ್ ರತ್ನ ಪ್ರಶಸ್ತಿಗೆ ಈ ಬಾರಿ ಯಾರನ್ನೂ ಆಯ್ಕೆ ಮಾಡಿಲ್ಲ. 2014ರ ಬಳಿಕ ಇದೇ ಮೊದಲ ಬಾರಿಗೆ ಖೇಲ್ ರತ್ನ ಪ್ರಶಸ್ತಿ ಪ್ರದಾನವಾಗದಿರುವುದು ವಿಶೇಷವಾಗಿದೆ.



ಅಥ್ಲೆಟಿಕ್ಸ್ ವಿಭಾಗದಲ್ಲಿ ತೇಜಸ್ವಿನ್ ಶಂಕರ್, ಪ್ರಿಯಾಂಕಾ ಗೋಸ್ವಾಮಿ ಮತ್ತು ಮೊಹಮ್ಮದ್ ಅಜ್ಮಲ್, ಬಾಕ್ಸಿಂಗ್‌ನಲ್ಲಿ ನರೇಂದ್ರ ಬೆರ್ವಾಲ್, ಚೆಸ್‌ನಲ್ಲಿ ವಿದಿತ್ ಗುಜರಾತಿ ಮತ್ತು ದಿವ್ಯಾ ದೇಶಮುಖ್, ಕಿವುಡರ ಶೂಟಿಂಗ್ ವಿಭಾಗದಲ್ಲಿ ಧನುಷ್ ಶ್ರೀಕಾಂತ್, ಹಾಕಿಯಲ್ಲಿ ರಾಜ್‌ಕುಮಾರ್ ಪಾಲ್ ಮತ್ತು ಲಾಲ್ರೆಮ್ಸಿಯಾಮಿ, ಕಬಡ್ಡಿಯಲ್ಲಿ ಸುರ್ಜೀತ್ ಮತ್ತು ಪೂಜಾ, ಪ್ಯಾರಾ ಶೂಟಿಂಗ್‌ನಲ್ಲಿ ರುದ್ರಾಂಶ್ ಖಂಡೇಲ್ವಾಲ್, ಪ್ಯಾರಾ ಅಥ್ಲೆಟಿಕ್ಸ್‌ನಲ್ಲಿ ಏಕ್ತಾ ಭ್ಯಾನ್, ರೋಯಿಂಗ್‌ನಲ್ಲಿ ಅರವಿಂದ್ ಸಿಂಗ್, ಶೂಟಿಂಗ್‌ನಲ್ಲಿ ಅಖಿಲ್ ಶಿಯೋರನ್ ಹಾಗೂ ಬ್ಯಾಡ್ಮಿಂಟನ್‌ನಲ್ಲಿ ತ್ರೀಸಾ ಜಾಲಿ ಮತ್ತು ಗಾಯತ್ರಿ ಗೋಪಿಚಂದ್ ಅರ್ಜುನ ಪ್ರಶಸ್ತಿ ಸ್ವೀಕರಿಸಿದರು.

ತರಬೇತಿ ಕ್ಷೇತ್ರದಲ್ಲಿ ಗಮನಾರ್ಹ ಸಾಧನೆ ಮಾಡಿದ ಅಥ್ಲೆಟಿಕ್ಸ್ ತರಬೇತುದಾರ ಪರ್ವೀರ್ ಸಿಂಗ್, ಬಾಕ್ಸಿಂಗ್ ತರಬೇತುದಾರ ಭೋಟೆ ಲಾಲ್ ಯಾದವ್ ಮತ್ತು ಶೂಟಿಂಗ್ ತರಬೇತುದಾರ್ತಿ ನೇಹಾ ಚವಾಣ್ ಅವರಿಗೆ ದ್ರೋಣಾಚಾರ್ಯ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಜೀವಮಾನ ಸಾಧನೆ ವಿಭಾಗದಲ್ಲಿ ಬಾಕ್ಸಿಂಗ್ ತರಬೇತುದಾರ ಧರ್ಮೇಂದ್ರ ಸಿಂಗ್ ಯಾದವ್ ಮತ್ತು ಕುಸ್ತಿ ತರಬೇತುದಾರ ವೀರೇಂದ್ರ ಕುಮಾರ್ ಅವರಿಗೆ ದ್ರೋಣಾಚಾರ್ಯ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಕ್ರೀಡಾ ಉತ್ತೇಜನ ಮತ್ತು ಅಭಿವೃದ್ಧಿಗೆ ನೀಡಿದ ಕೊಡುಗೆಯನ್ನು ಪರಿಗಣಿಸಿ ಪುಣೆಯ ಆರ್ಮಿ ಪ್ಯಾರಾಲಿಂಪಿಕ್ ನೋಡ್ ಸಂಸ್ಥೆಗೆ ರಾಷ್ಟ್ರೀಯ ಕ್ರೀಡಾ ಪ್ರೋತ್ಸಾಹನ ಪ್ರಶಸ್ತಿ ಪ್ರದಾನ ಮಾಡಲಾಯಿತು. ಸಮಾರಂಭದಲ್ಲಿ ಕೇಂದ್ರ ಕ್ರೀಡಾ ಸಚಿವ ಮನ್ಸುಖ್ ಮಾಂಡವಿಯಾ, ಕ್ರೀಡಾ ಕಾರ್ಯದರ್ಶಿ ಹರಿ ರಂಜನ್ ರಾವ್ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

‘ಮೇಕೆದಾಟು ಯೋಜನೆಗೆ ಅನುಮತಿ ನೀಡಿ, ಕಸ್ತೂರಿರಂಗನ್ ವರದಿ ಹಿಂಪಡೆಯಿರಿ’



● ವಿಕ್ರಮ ವಾಹಿನಿ । ಮೈಸೂರು

ಮೇಕೆದಾಟು ಅಣೆಕಟ್ಟು ಯೋಜನೆಗೆ ಅಗತ್ಯವಾದ ಅನುಮತಿಗಳನ್ನು ನೀಡಬೇಕು ಹಾಗೂ ಪಶ್ಚಿಮ ಘಟ್ಟಗಳಿಗೆ ಸಂಬಂಧಿಸಿದ ಕಸ್ತೂರಿರಂಗನ್ ವರದಿಯ ಶಿಫಾರಸುಗಳನ್ನು ಹಿಂಪಡೆಯಬೇಕು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಶುಕ್ರವಾರ ಕೇಂದ್ರ ಸರ್ಕಾರವನ್ನು ಒತ್ತಾಯಿಸಿದ್ದಾರೆ. ಇದರ ಜತೆಗೆ ರಾಜ್ಯದ 1,000 ಸರ್ಕಾರಿ ಶಾಲೆಗಳನ್ನು ಕರ್ನಾಟಕ ಪಬ್ಲಿಕ್ ಶಾಲೆಗಳಾಗಿ ಮೇಲ್ದರ್ಜೆಗೇರಿಸಲು ಅನುಕೂಲವಾಗುವಂತೆ ಕಾರ್ಪೊರೇಟ್ ಸಾಮಾಜಿಕ ಹೊಣೆಗಾರಿಕೆ (ಸಿಎಸ್‌ಆರ್) ನೀತಿಯನ್ನು ಕರ್ನಾಟಕದ ಮಾರ್ಗಸೂಚಿಗಳಿಗೆ ಅನುಗುಣವಾಗಿ ರೂಪಿಸುವಂತೆಯೂ ಮನವಿ ಮಾಡಿದ್ದಾರೆ.

ಮೈಸೂರಿನಲ್ಲಿ ನಡೆದ ‘ಕಾಸ್ಮೋಸ್’ ತಾರಾಲಯದ ಉದ್ಘಾಟನಾ ಸಮಾರಂಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ಸಮ್ಮುಖದಲ್ಲಿ ಮಾತನಾಡಿದ ಶಿವಕುಮಾರ್, ರಾಜ್ಯದ ಪ್ರಮುಖ ಅಭಿವೃದ್ಧಿ ಸವಾಲುಗಳನ್ನು ಎದುರಿಸಲು ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ನಡುವೆ ಸಮನ್ವಯ ಹಾಗೂ ಸಹಕಾರ ಅಗತ್ಯ ಎಂದು ಪ್ರತಿಪಾದಿಸಿದರು.

ಮೇಕೆದಾಟು ಅಣೆಕಟ್ಟು ಯೋಜನೆಯ ಕುರಿತು ಪ್ರಸ್ತಾಪಿಸಿದ ಮುಖ್ಯಮಂತ್ರಿ, ಕಾವೇರಿ ನದಿಗೆ ಅಡ್ಡಲಾಗಿ ನಿರ್ಮಿಸಲು ಉದ್ದೇಶಿಸಿರುವ ಈ ಯೋಜನೆಗೆ ಸಂಬಂಧಿಸಿದಂತೆ ಸುಪ್ರೀಂ ಕೋರ್ಟ್ ಈಗಾಗಲೇ ತೀರ್ಪು ನೀಡಿದೆ. ಹೀಗಾಗಿ ಕಾನೂನುಬದ್ಧವಾಗಿ ರಾಜ್ಯಕ್ಕೆ ನೆರವು ನೀಡುವ ಮೂಲಕ ಯೋಜನೆಗೆ ಅಗತ್ಯವಿರುವ ಅಂತಿಮ ಶಾಸನಬದ್ಧ ಅನುಮತಿಗಳನ್ನು ನೀಡಬೇಕು ಎಂದು ಪ್ರಧಾನಿಯವರನ್ನು ಕೋರಿದರು. “ಸರ್, ಕಾವೇರಿ ನದಿಗೆ ಅಡ್ಡಲಾಗಿ ನಿರ್ಮಿಸಲು ಉದ್ದೇಶಿಸಿರುವ ಮೇಕೆದಾಟು ಯೋಜನೆಯ ಬಗ್ಗೆ ನಿಮಗೆ ತಿಳಿದಿದೆ. ಈ ಯೋಜನೆಯನ್ನು ಕರ್ನಾಟಕದಲ್ಲಿ ನಿರ್ಮಿಸಬೇಕು ಎಂಬುದಕ್ಕೆ ಸಂಬಂಧಿಸಿದಂತೆ ಸುಪ್ರೀಂ ಕೋರ್ಟ್ ಸ್ಪಷ್ಟ ತೀರ್ಪು ನೀಡಿದೆ. ಇದನ್ನು ಯಾರೂ ತಡೆಯಲು ಸಾಧ್ಯವಿಲ್ಲ. ಈ ನಿಟ್ಟಿನಲ್ಲಿ ಕಾನೂನುಬದ್ಧವಾಗಿ ನಮಗೆ ನೆರವು ನೀಡಿ” ಎಂದು ಮನವಿ ಮಾಡಿದರು.

ಇದು ಕುಡಿಯುವ ನೀರಿಗಾಗಿ ರೂಪಿಸಿರುವ ಸಮತೋಲನ ಜಲಾಶಯ ಯೋಜನೆಯಾಗಿದ್ದು, ಯಾವುದೇ ವಿಳಂಬವಿಲ್ಲದೆ ಮುಂದುವರಿಯಲು ಕೇಂದ್ರದ ಸಹಕಾರ ಅಗತ್ಯವಿದೆ ಎಂದು ಹೇಳಿದರು. ಕಾವೇರಿ ನದಿ ನೀರು ತಮಿಳುನಾಡು, ಪುದುಚೇರಿ, ಕೇರಳ, ಬೆಂಗಳೂರು ಸೇರಿದಂತೆ ಹಲವು ಪ್ರದೇಶಗಳಿಗೆ ಉಪಯುಕ್ತವಾಗಲಿದೆ. ಮೇಕೆದಾಟು ಯೋಜನೆಯಿಂದ ತಮಿಳುನಾಡಿಗೂ ಅನುಕೂಲವಾಗಲಿದೆ ಎಂದು ಅವರು ಪ್ರತಿಪಾದಿಸಿದರು.

ಪಶ್ಚಿಮ ಘಟ್ಟಗಳಿಗೆ ಸಂಬಂಧಿಸಿದ ಕಸ್ತೂರಿರಂಗನ್ ವರದಿಯ ಶಿಫಾರಸುಗಳನ್ನು ಹಿಂಪಡೆಯುವಂತೆಯೂ ಮುಖ್ಯಮಂತ್ರಿ ಕೇಂದ್ರ ಸರ್ಕಾರವನ್ನು ಒತ್ತಾಯಿಸಿದರು. ಪಶ್ಚಿಮ ಘಟ್ಟ ಪ್ರದೇಶಗಳಲ್ಲಿ ವ್ಯಾಪಕ ಸಾರ್ವಜನಿಕ ಸಮಾಲೋಚನೆ ನಡೆಸಿದ ಬಳಿಕ, ವರದಿಯ ಶಿಫಾರಸುಗಳನ್ನು ವಿರೋಧಿಸುವ ನಿರ್ಣಯವನ್ನು ಕರ್ನಾಟಕ ವಿಧಾನಮಂಡಲವು ಸರ್ವಾನುಮತದಿಂದ ಅಂಗೀಕರಿಸಿದೆ ಎಂದು ತಿಳಿಸಿದರು.

ರಾಜ್ಯದ ಜನರ ಅಭಿಪ್ರಾಯ ಹಾಗೂ ವಿಧಾನಮಂಡಲದ ನಿರ್ಣಯವನ್ನು ಪರಿಗಣಿಸಿ ಕಸ್ತೂರಿರಂಗನ್ ವರದಿಯ ಶಿಫಾರಸುಗಳನ್ನು ಹಿಂಪಡೆಯಲು ಕೇಂದ್ರ ಸರ್ಕಾರ ಸಹಕರಿಸಬೇಕು ಎಂದು ಪ್ರಧಾನಿಯವರಲ್ಲಿ ಮನವಿ ಮಾಡಿದರು. ರಾಜ್ಯದಲ್ಲಿ ಪ್ರಾಥಮಿಕ ಶಿಕ್ಷಣದ ಗುಣಮಟ್ಟ ಹಾಗೂ ಉದ್ಯೋಗ ಮತ್ತು ಶಿಕ್ಷಣಕ್ಕಾಗಿ ನಗರ ಪ್ರದೇಶಗಳಿಗೆ ಹೆಚ್ಚುತ್ತಿರುವ ವಲಸೆಯ ಬಗ್ಗೆಯೂ ಶಿವಕುಮಾರ್ ಕಳವಳ ವ್ಯಕ್ತಪಡಿಸಿದರು. ಶಿಕ್ಷಣ ಮತ್ತು ಉದ್ಯೋಗದ ಉದ್ದೇಶದಿಂದ ನಡೆಯುತ್ತಿರುವ ವಲಸೆಯು ಜನಸಂಖ್ಯೆಯ ಸ್ವರೂಪದಲ್ಲಿ ಬದಲಾವಣೆ ತರುತ್ತಿದೆ ಎಂದು ಹೇಳಿದರು.

ಅವರ ಪ್ರಕಾರ, ಈ ವಲಸೆಯ ಪ್ರಮಾಣ 2002ರಲ್ಲಿ ಶೇ.31ರಷ್ಟಿದ್ದು, 2026ರ ವೇಳೆಗೆ ಶೇ.47ಕ್ಕೆ ಏರಿಕೆಯಾಗಿದೆ. ಇದೇ ಪ್ರವೃತ್ತಿ ಮುಂದುವರಿದರೆ ಮುಂದಿನ ಎರಡು ದಶಕಗಳಲ್ಲಿ ಶೇ.70ಕ್ಕೆ ತಲುಪುವ ಸಾಧ್ಯತೆಯಿದೆ ಎಂದು ಎಚ್ಚರಿಸಿದರು. ಈ ಸಮಸ್ಯೆಯನ್ನು ಎದುರಿಸಲು ಮತ್ತು ಸಾರ್ವಜನಿಕ ಶಿಕ್ಷಣ ವ್ಯವಸ್ಥೆಯನ್ನು ಬಲಪಡಿಸಲು ಸಿಎಸ್‌ಆರ್ ನೀತಿಗಳನ್ನು ಕರ್ನಾಟಕದ ಸಿಎಸ್‌ಆರ್ ಮಾರ್ಗಸೂಚಿಗಳಿಗೆ ಹೊಂದಾಣಿಕೆ ಮಾಡುವಂತೆ ಕೇಂದ್ರ ಸರ್ಕಾರ ಸಲಹಾ ಸೂಚನೆ ನೀಡಬೇಕು ಎಂದು ಕೋರಿದರು. ಇದರಿಂದ ರಾಜ್ಯದ 1,000 ಸರ್ಕಾರಿ ಶಾಲೆಗಳನ್ನು ‘ಕರ್ನಾಟಕ ಪಬ್ಲಿಕ್ ಶಾಲೆ’ಗಳಾಗಿ ಮೇಲ್ದರ್ಜೆಗೇರಿಸಲು ನೆರವಾಗಲಿದೆ ಎಂದು ತಿಳಿಸಿದರು.

ಪ್ಲಾಸ್ಟಿಕ್ ನಿಯಮ ಉಲ್ಲಂಘನೆ: ದಂಡ

● ವಿಕ್ರಮ ವಾಹಿನಿ । ಬೆಂಗಳೂರು

ನಿಷೇಧಿತ ಏಕಬಳಕೆ ಪ್ಲಾಸ್ಟಿಕ್ ಮಾರಾಟ ಹಾಗೂ ಘನತ್ಯಾಜ್ಯ ನಿರ್ವಹಣಾ ನಿಯಮಗಳ ಉಲ್ಲಂಘನೆ ವಿರುದ್ಧ ಬೆಂಗಳೂರು ಕೇಂದ್ರ ನಗರ ಪಾಲಿಕೆ ಅಧಿಕಾರಿಗಳು ಮತ್ತು ಮಾರ್ಷಲ್‌ಗಳು ಕಾರ್ಯಾಚರಣೆ ನಡೆಸಿ ಒಟ್ಟು 35 ಸಾವಿರ ರೂ. ದಂಡ ವಿಧಿಸಿದ್ದಾರೆ.

ಚಿಕ್ಕಪೇಟೆ ವಿಭಾಗದ ಜೆಪ್ಪೊ ಗೋದಾಮಿನಲ್ಲಿ ಏಕಬಳಕೆ ಪ್ಲಾಸ್ಟಿಕ್ ನಿಯಮ ಉಲ್ಲಂಘನೆ ಕಂಡುಬಂದ ಹಿನ್ನೆಲೆಯಲ್ಲಿ 25 ಸಾವಿರ ರೂ. ದಂಡ ವಿಧಿಸಿ, ಸುಮಾರು 15 ಕೆ.ಜಿ. ನಿಷೇಧಿತ ಪ್ಲಾಸ್ಟಿಕ್ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ.

ನಗರದ ವಿವಿಧ ಪ್ರದೇಶಗಳಲ್ಲಿ ಸ್ವಚ್ಛತಾ ನಿಯಮ ಉಲ್ಲಂಘಿಸಿದವರ ವಿರುದ್ಧ 14 ಪ್ರಕರಣಗಳನ್ನು ದಾಖಲಿಸಿ, 10 ಸಾವಿರ ರೂ. ದಂಡ ವಿಧಿಸಲಾಗಿದೆ ಎಂದು ಬೆಂಗಳೂರು ಕೇಂದ್ರ ನಗರ ಪಾಲಿಕೆ ಆಯುಕ್ತ ಜಗದೀಶ್ ಜಿ. ತಿಳಿಸಿದ್ದಾರೆ.

ಚಿಕ್ಕಪೇಟೆ ವಿಭಾಗದ ಆರ್.ವಿ. ರಸ್ತೆಯಲ್ಲಿರುವ ಜೆಪ್ಪೊ ಗೋದಾಮಿನಲ್ಲಿ ಪಾಲಿಕೆ ಅಧಿಕಾರಿಗಳು ಪರಿಶೀಲನೆ ನಡೆಸಿದಾಗ ಏಕಬಳಕೆ ಪ್ಲಾಸ್ಟಿಕ್ ಬಳಕೆ ಮತ್ತು ಸಂಗ್ರಹಣೆಗೆ ಸಂಬಂಧಿಸಿದ ನಿಯಮಗಳ ಉಲ್ಲಂಘನೆ ಕಂಡುಬಂದಿದೆ. ಈ ಹಿನ್ನೆಲೆಯಲ್ಲಿ ಸಂಬಂಧಪಟ್ಟವರಿಗೆ 25 ಸಾವಿರ ರೂ. ದಂಡ ವಿಧಿಸಲಾಗಿದ್ದು, ನಿಯಮಬಾಹಿರವಾಗಿ ಸಂಗ್ರಹಿಸಿಟ್ಟಿದ್ದ ಸುಮಾರು 15 ಕೆ.ಜಿ. ಏಕಬಳಕೆ ಪ್ಲಾಸ್ಟಿಕ್ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ.

ಇದೇ ವೇಳೆ, ಬೆಂಗಳೂರು ಕೇಂದ್ರ ನಗರ ಪಾಲಿಕೆ ವ್ಯಾಪ್ತಿಯ ವಿವಿಧ ಪ್ರದೇಶಗಳಲ್ಲಿ ಮಾರ್ಷಲ್‌ಗಳು ಸ್ವಚ್ಛತಾ ನಿಯಮ ಉಲ್ಲಂಘನೆ ವಿರುದ್ಧ ಕಾರ್ಯಾಚರಣೆ ನಡೆಸಿ 14 ಪ್ರಕರಣಗಳಲ್ಲಿ ಒಟ್ಟು 10 ಸಾವಿರ ರೂ. ದಂಡ ವಿಧಿಸಿದ್ದಾರೆ.

ಶಾಂತಲಾ ನಗರದಲ್ಲಿ ಪಾದಚಾರಿ ಮಾರ್ಗದಲ್ಲಿ ಸಿಗರೇಟ್ ತುಂಡುಗಳನ್ನು ಎಸೆದ ಅಂಗಡಿಗೆ ಒಂದು ಸಾವಿರ ರೂ. ಹಾಗೂ ತ್ಯಾಜ್ಯ ವಿಂಗಡಣೆ ಮಾಡದಿರುವುದಕ್ಕೆ ಮತ್ತೊಂದು ಸಾವಿರ ರೂ. ದಂಡ ವಿಧಿಸಲಾಗಿದೆ.

ವನ್ನಾರ್‌ಪೇಟೆಯಲ್ಲಿ ನಿಷೇಧಿತ ಪ್ಲಾಸ್ಟಿಕ್ ಬಳಕೆಗೆ 1,500 ರೂ. ದಂಡ ವಿಧಿಸಲಾಗಿದೆ. ಕೋನೇನ ಅಗ್ರಹಾರದ ವಿಂಡ್ ಟನಲ್ ರಸ್ತೆಯಲ್ಲಿ ಘನತ್ಯಾಜ್ಯ ನಿರ್ವಹಣೆ ಮತ್ತು ಏಕಬಳಕೆ ಪ್ಲಾಸ್ಟಿಕ್ ನಿಯಮ ಉಲ್ಲಂಘನೆಯ ಎರಡು ಪ್ರಕರಣಗಳಿಗೆ ಎರಡು ಸಾವಿರ ರೂ. ದಂಡ ವಿಧಿಸಲಾಗಿದೆ.

Vikrama Vahini Kannada Daily, #204, Forest Layout, Jnanabharathi, Bangalore-560095 — PRGI NO: KARKAN/2018/78481 — vikramavahini@gmail.com — 93535 91145
Printed by B.N. Murali Prasad, Published by Swarna Latha B.N., and Printed at Swarna Graphics, Forest Layout, Jnanabharathi, Bangalore -560059 and Published at Bangalore, Editor: B.N. Murali Prasad., Volume:9, Issue : 213,